ಸಂಪುಟ : 11 ಸಂಚಿಕೆ: 59 ಪುಟ : 4+2 ಬೆಲೆ: 3.00 ಶುಕ್ರವಾರ ಎಪ್ರಿಲ್ 03 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 59 Pages : 4+2 Price : 3.00 Friday April 03 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜನಗಣತಿ ಸ್ವಯಂ ನೋಂದಣಿ ಕಾರ್ಯಾಗಾರ ಉದ್ಘಾಟಿಸಿದ ಡಿಸಿ ಶ್ರೀಧರ್

# ಸರಿಯಾದ ಯೋಜನೆ ರೂಪಿಸಿದರೆ ಅನುಷ್ಠಾನ ಸುಗಮ

**■ ವಿಜಯಸಾಕ್ಷಿ ಸುದ್ದಿ, ಗದಗ**

ದೇಶದ ಜನಸಂಖ್ಯೆ ಹಾಗೂ ಸಾಮಾಜಿಕ-ಆರ್ಥಿಕ ಸ್ಥಿತಿಗತಿಗಳ ಮಾಹಿತಿಯನ್ನು ಪ್ರತಿ 10 ವರ್ಷಕ್ಕೊಮ್ಮೆ ಸಂಗ್ರಹಿಸುವ ಜನಗಣತಿ ಪ್ರಕ್ರಿಯೆ ಅಭಿವೃದ್ಧಿ ಯೋಜನೆಗಳಿಗೆ ಪ್ರಮುಖ ಆಧಾರವಾಗಿದ್ದು, ಯೋಜನೆಗಳನ್ನು ಸಮರ್ಪಕವಾಗಿ ರೂಪಿಸಿದರೆ ಅವುಗಳ ಅನುಷ್ಠಾನ ಸುಗಮವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ಭಾರತೀಯ ಜನಗಣತಿ 2026-27ರ ಅಂಗವಾಗಿ ಆಯೋಜಿಸಿದ್ದ ಜನಗಣತಿ ಸ್ವಯಂ ನೋಂದಣಿ ಜಾಗೃತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

2021ರ ಜನಗಣತಿ ಕೋವಿಡ್ ಹಿನ್ನೆಲೆ ವಿಳಂಬವಾಗಿದ್ದು, ಇದೀಗ 2027ರ ಜನಗಣತಿ ಪ್ರಕ್ರಿಯೆ ಆರಂಭವಾಗಿದೆ. ಸಾರ್ವಜನಿಕರು ಅಧಿಕೃತ ಪೋರ್ಟಲ್‌ನಲ್ಲಿ ಲಾಗಿನ್ ಆಗಿ ತಮ್ಮ ಮನೆಯ ವಿವರಗಳು, ವಾಹನ, ಉದ್ಯೋಗ ಸೇರಿದಂತೆ ಅಗತ್ಯ ಮಾಹಿತಿಯನ್ನು ಎಪ್ರಿಲ್ 15ರೊಳಗೆ ಭರ್ತಿ ಮಾಡಿದರೆ ಸ್ವಯಂ ಗಣತಿ ಗುರುತಿನ ಸಂಖ್ಯೆ (ಐಡಿ) ಲಭ್ಯವಾಗುತ್ತದೆ. ಗಣತಿದಾರರು ಮನೆಗೆ ಭೇಟಿ ನೀಡಿದಾಗ ಈ ಐಡಿಯನ್ನು ಒದಗಿಸಿದರೆ ಗಣತಿ ಪ್ರಕ್ರಿಯೆ ತ್ವರಿತಗೊಳ್ಳುತ್ತದೆ ಎಂದು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಪ್ರಾಸ್ತಾವಿಕವಾಗಿ ಮಾತನಾಡಿ, ಈ ಬಾರಿಯ ಜನಗಣತಿಯಲ್ಲಿ ಸಾರ್ವಜನಿಕರಿಗೆ ಸ್ವಯಂ ನೋಂದಣಿ ವ್ಯವಸ್ಥೆ ಕಲ್ಪಿಸಲಾಗಿದೆ. ಎಪ್ರಿಲ್ 16ರಿಂದ ಮೇ 15ರವರೆಗೆ ಮನೆ ಪಟ್ಟಿ (ಹೌಸ್ ಲಿಸ್ಟಿಂಗ್) ಕಾರ್ಯಾಚರಣೆ ನಡೆಯಲಿದೆ ಎಂದರು.



ಶಿಕ್ಷಣ ಇಲಾಖೆಯ ಶಿಕ್ಷಕರು (ಸರ್ಕಾರಿ ಹಾಗೂ ಅನುದಾನಿತ), ಅಂಗನವಾಡಿ ಮೇಲ್ವಿಚಾರಕರು, ಆಶಾ ಕಾರ್ಯಕರ್ತರು ಹಾಗೂ ಇತರೆ ಇಲಾಖೆಗಳ ಸಿಬ್ಬಂದಿಯನ್ನು ಗಣತಿದಾರರನ್ನಾಗಿ ನಿಯೋಜಿಸಲಾಗಿದ್ದು, ಪ್ರತಿ ಆರು ಗಣತಿದಾರರಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗಿದೆ.

ಸಂಪನ್ಮೂಲ ವ್ಯಕ್ತಿ ಬಿ.ಜಿ. ಗಿರಿತಿಮ್ಮಣ್ಣವರ ಅವರು ಪಿ.ಪಿ.ಟಿ. ಮೂಲಕ ಸ್ವಯಂ ನೋಂದಣಿ ವಿಧಾನವನ್ನು ವಿವರಿಸಿದರು. ಇದೇ ವೇಳೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಕಿತ್ತೂರು ಕರ್ನಾಟಕ ಪತ್ರಿಕೆಯ ಸಂಪಾದಕ ಮಂಜುನಾಥ ಬಸಪ್ಪ ಅಬ್ಬಿಗೇರಿ ಅವರು ತಮ್ಮ ಮೊಬೈಲ್ ಮೂಲಕ ಸ್ವಯಂ ಗಣತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದರು.

ಈ ಸಂದರ್ಭದಲ್ಲಿ ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಕುಲಪತಿ (ಪ್ರಭಾರ) ಪ್ರೊ. ಡಾ. ಸುರೇಶ ವಿ. ನಾಡಗೌಡ್ರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಬಸವರಾಜ ಪಾಟೀಲ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ, ಜಿ.ಪಂ. ಅಧಿಕಾರಿ ಎಂ.ವಿ. ಚಳಗೇರಿ, ಜನಗಣತಿ ಜಿಲ್ಲಾ ನೋಡಲ್ ಅಧಿಕಾರಿ ರಂಜಿತ್ ಜಾಲಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

> "ಜನಗಣತಿ ದೇಶದ ಅಭಿವೃದ್ಧಿಗೆ ದಿಕ್ಕು ತೋರಿಸುವ ಪ್ರಮುಖ ಪ್ರಕ್ರಿಯೆ. ಯೋಜನೆ ಸರಿಯಾಗಿ ರೂಪಿಸಿದರೆ ಅದರ ಅನುಷ್ಠಾನ ಸುಗಮವಾಗುತ್ತದೆ."
> – **ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ.

ಜಿಲ್ಲೆಯಲ್ಲಿ ಒಟ್ಟು 1905 ಗಣತಿ ಬ್ಲಾಕ್‌ಗಳನ್ನು ರಚಿಸಲಾಗಿದ್ದು, ಗದಗ-658, ನರಗುಂದ-175, ಶಿರಹಟ್ಟಿ-160, ಮುಂಡರಗಿ-242, ಗಜೇಂದ್ರಗಡ-228, ಲಕ್ಷ್ಮೇಶ್ವರ-196 ಹಾಗೂ ರೋಣ-246 ಗಣತಿ ಬ್ಲಾಕ್‌ಗಳು ಸೇರಿವೆ. ಜೊತೆಗೆ 90 ಕೊಳಗೇರಿ ಪ್ರದೇಶಗಳನ್ನು ಗುರುತಿಸಲಾಗಿದೆ. ಗ್ರಾಮೀಣ ಪ್ರದೇಶದಲ್ಲಿ 298 ಮೇಲ್ವಿಚಾರಕರು, 1480 ಗಣತಿದಾರರು ಹಾಗೂ 1205 ಎಚ್‌ಎಲ್‌ಬಿಗಳು ಕಾರ್ಯನಿರ್ವಹಿಸಲಿದ್ದಾರೆ. ನಗರ ಪ್ರದೇಶದಲ್ಲಿ 134 ಮೇಲ್ವಿಚಾರಕರು, 744 ಗಣತಿದಾರರು ಹಾಗೂ 701 ಎಚ್‌ಎಲ್‌ಬಿಗಳು ಕಾರ್ಯನಿರ್ವಹಿಸಲಿದ್ದಾರೆ.

## ಮಾಜಿ ಶಾಸಕ ಡಿ ಆರ್ ಪಾಟೀಲರಿಗೆ ಸಂಯಮ ಪ್ರಶಸ್ತಿ ಪ್ರದಾನ



**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ವತಿಯಿಂದ ನೀಡಲಾಗುವ ಪ್ರತಿಷ್ಠಿತ "ಸಂಯಮ ಪ್ರಶಸ್ತಿ" ಪ್ರದಾನ ಕಾರ್ಯಕ್ರಮವು ಬೆಂಗಳೂರು ನಗರದ ಗಾಂಧಿ ಭವನದ ಮಹದೇವ ದೇಸಾಯಿ ಸಭಾಂಗಣದಲ್ಲಿ ನಡೆಯಿತು.

2023ನೇ ಸಾಲಿನ ಸಂಯಮ ಪ್ರಶಸ್ತಿಯನ್ನು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ ಅವರಿಗೆ, 2024ನೇ ಸಾಲಿನ ಪ್ರಶಸ್ತಿಯನ್ನು ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಅವರಿಗೆ ಹಾಗೂ 2025ನೇ ಸಾಲಿನ ಪ್ರಶಸ್ತಿಯನ್ನು ಕರ್ನಾಟಕ ಗಾಂಧೀ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ. ವೂಡೇ ಪಿ. ಕೃಷ್ಣ ಅವರಿಗೆ ಪ್ರದಾನ ಮಾಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗರೆಡ್ಡಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ ಅವರು ಭಾಗವಹಿಸಿ ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಅಧ್ಯಕ್ಷ ಶರಣಪ್ಪ ಸಲಾದಪುರ, ಮುಖ್ಯಮಂತ್ರಿಗಳ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಬಿ.ಬಿ. ಕಾವೇರಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.


# ಭಕ್ತ ಸಾಗರದ ಮಧ್ಯೆ ತೋಂಟದಾರ್ಯ ಜಾತ್ರಾ ಮಹೋತ್ಸವ

**■ ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕದ ಪ್ರಮುಖ ಲಿಂಗಾಯತ ಮಠಗಳಲ್ಲಿ ಒಂದಾದ ಜಗದ್ಗುರು ತೋಂಟದಾರ್ಯ ಮಠದ ಮಹಾ ರಥೋತ್ಸವವು ಗುರುವಾರ ಸಂಜೆ ಚಿತ್ತಾ ನಕ್ಷತ್ರದಲ್ಲಿ ಭಕ್ತ ಸಾಗರದ ಮಧ್ಯೆ ಸಡಗರ ಸಂಭ್ರಮದಿಂದ ಜರುಗಿತು.

ಮಠದ ಮುಂದಿನ ರಥಬೀದಿಯಲ್ಲಿ ಸಾಗಿದ ರಥೋತ್ಸವಕ್ಕೆ ನಾಡಿನ ವಿವಿಧೆಡೆಯಿಂದ ಆಗಮಿಸಿದ್ದ ಸಾವಿರಾರು ಭಕ್ತರು ಉತ್ತತ್ತಿ, ಬಾಳೆಹಣ್ಣು, ಲಿಂಬೆಹಣ್ಣು ಎಸೆದು ಭಕ್ತಿ ಸಮರ್ಪಿಸಿದರು. ರಥೋತ್ಸವಕ್ಕೂ ಮುನ್ನ ಭಕ್ತರು ಶ್ರೀಮಠದಲ್ಲಿನ ಗದ್ದುಗೆಯ ದರ್ಶನ ಪಡೆದರು.

ಜಾತ್ರೆ ಅಂಗವಾಗಿ ನಡೆದ ಅಡ್ಡಪಲ್ಲಕ್ಕಿಯಲ್ಲಿ ಬಸವಣ್ಣನವರ ಹಾಗೂ ಸಿದ್ಧಲಿಂಗೇಶ್ವರರ ಭಾವಚಿತ್ರಗಳನ್ನು ಹಾಗೂ ವಚನದ ಕಟ್ಟುಗಳನ್ನು ಇರಿಸಿ ಮೆರವಣಿಗೆ ನಡೆಸಲಾಯಿತು. ತೋಂಟದ ಸಿದ್ಧರಾಮ ಸ್ವಾಮೀಜಿ ಸಾವಿರಾರು ಭಕ್ತರೊಂದಿಗೆ ಹೆಜ್ಜೆ ಹಾಕಿದರು. ಮಹಾರಥೋತ್ಸವದಲ್ಲಿ 10ಕ್ಕೂ ಹೆಚ್ಚು ಸಾಂಸ್ಕೃತಿಕ ಕಲಾ ತಂಡಗಳು ಮೆರವಣಿಗೆಯುದ್ದಕ್ಕೂ ಭಾಗವಹಿಸಿದ್ದವು.



ರಥೋತ್ಸವಕ್ಕೂ ಮುನ್ನ ಪರಂಪರೆಯಂತೆ ವೀರನಾರಾಯಣ ರಸ್ತೆಯಲ್ಲಿರುವ ಎಸ್.ಎಸ್. ಕಳಸಾಪೂರಶೆಟ್ರ ನಿವಾಸದಿಂದ ಅಲಂಕೃತ ತೆರೆದ ವಾಹನದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳ ಮೆರವಣಿಗೆ ಸಾಗಿತು.

ಮೆರವಣಿಗೆ ಸರಾಫ್ ಬಜಾರ್, ಬಸವೇಶ್ವರ ವೃತ್ತ, ಹುಯಿಲಗೋಳ ನಾರಾಯಣರಾವ್ ವೃತ್ತ, ಮಹೇಂದ್ರಕರ್ ವೃತ್ತದ ಮೂಲಕ ಮಠಕ್ಕೆ ತಲುಪಿತು. ಜಾಂಜ್ ಮೇಳ, ಕರಡಿ ಮಜಲು ಸೇರಿದಂತೆ ವಿವಿಧ ವಾದ್ಯಮೇಳಗಳು, ಜನಪದ ಕಲಾ ತಂಡಗಳು ಮೆರವಣಿಗೆಗೆ ಮೆರುಗು ತಂದವು. ಸುಮಾರು ಮೂರು ಗಂಟೆಗಳ ಕಾಲ ಮೆರವಣಿಗೆ ನಡೆಯಿತು. ವಿವಿಧ ಕಲಾ ತಂಡಗಳ ಪ್ರದರ್ಶನಗಳು ನೋಡುಗರನ್ನು ಕಣ್ಮನ ಸೆಳೆಯುವಂತಾಗಿದ್ದವು.

ಮೆರವಣಿಗೆಯುದ್ದಕ್ಕೂ ಪಾಲ್ಗೊಂಡ ಭಕ್ತರಿಗೆ ಹಾಗೂ ಮೆರವಣಿಗೆ ತಂಡಗಳಿಗೆ ಮುಸ್ಲಿಂ ಸಮುದಾಯ ಸೇರಿದಂತೆ ವಿವಿಧ ಸಮುದಾಯದ ವ್ಯಾಪಾರಿಗಳು ತಂಪು ಪಾನೀಯಗಳನ್ನು ವಿತರಿಸಿ ಐಕ್ಯತೆಯ ಸಂದೇಶ ಸಾರಿದರು. ರಸ್ತೆಯುದ್ದಕ್ಕೂ ರಂಗೋಲಿ ಹಾಕಿ ಭಕ್ತಿಭಾವದಿಂದ ಪೂಜ್ಯರನ್ನು ಸ್ವಾಗತಿಸಿದರು.

ಭಜನಾ ಮಂಡಳಿ, ನಂದಿಕೋಲು, ಸಾಂಪ್ರದಾಯಿಕ ಉಡುಪಿನೊಂದಿಗೆ ಸಾಗಿದ ಛತ್ರ-ಚಾಮರಗಳು ಭಕ್ತರ ಮನಸೂರೆಗೊಂಡವು.

ತೆರೆದ ವಾಹನದಲ್ಲಿ ಆಗಮಿಸಿದ ಶ್ರೀಗಳಿಗೆ ಭಕ್ತರು ಪೂಜೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು. ಮೆರವಣಿಗೆಯಲ್ಲಿ ನೂರಾರು ಭಕ್ತರು ಪಾಲ್ಗೊಂಡಿದ್ದರು.

### ಶಿರೂರಿನಲ್ಲಿ ಮನೆ ಮನೆಗೆ ಪ್ರಚಾರ; ಉಮೇಶ ಮೇಟಿ ಪರ ಕೃಷ್ಣಗೌಡ ಮತಯಾಚನೆ

# ಅಭಿವೃದ್ಧಿಗಾಗಿ ಕಾಂಗ್ರೆಸ್ ಗೆಲ್ಲಿಸಿ



> "ಜಿಲ್ಲೆಯ ಸಮಗ್ರ ಅಭಿವೃದ್ಧಿಗಾಗಿ ಕಾಂಗ್ರೆಸ್ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಮತದಾರರು ಅಭಿವೃದ್ಧಿಯ ಪರವಾಗಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಬೇಕು."
> – **ಕೃಷ್ಣಗೌಡ ಎಚ್. ಪಾಟೀಲ,** ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ.

**■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ**

2023ರಿಂದ ಕಾಂಗ್ರೆಸ್ ಸರ್ಕಾರ ಬಾಗಲಕೋಟೆ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಮುಂದಿನ ಅಭಿವೃದ್ಧಿಗಾಗಿ ಮತದಾರರು ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಬೇಕು ಎಂದು ಯುವ ಕಾಂಗ್ರೆಸ್ ಸಮಿತಿ ಗದಗ ಜಿಲ್ಲಾಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಮನವಿ ಮಾಡಿದರು.

ಶಿರೂರ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಅವರ ಪರವಾಗಿ ಮತಯಾಚನೆ ನಡೆಸಿದ ವೇಳೆ ಅವರು ಮಾತನಾಡಿ, ಜಿಲ್ಲೆಯ ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರಗಳಿಗೆ ಹೆಚ್ಚಿನ ಅನುದಾನ ನೀಡಲಾಗಿದೆ ಎಂದರು. ನೂತನ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಸ್ಥಾಪನೆಗೆ ₹425 ಕೋಟಿ ಮಂಜೂರು ಮಾಡಲಾಗಿದ್ದು, 150 ಎಂಬಿಬಿಎಸ್ ಸೀಟುಗಳನ್ನು ಒದಗಿಸುವ ಉದ್ದೇಶ ಹೊಂದಿದೆ ಎಂದು ತಿಳಿಸಿದರು.

ಯುಕೆಪಿ ಹಂತ-3 ಕಾಮಗಾರಿ, ರೈತರ ಪರಿಹಾರಕ್ಕಾಗಿ 2026ರ ಬಜೆಟ್‌ನಲ್ಲಿ 3,000 ಕೋಟಿ ಮೀಸಲಿಡಲಾಗಿದೆ. ಬಾದಾಮಿ ತಾಲೂಕಿನ ಕುಳಗೇರಿ ಕ್ರಾಸ್ ಬಳಿ ಟ್ರಾಮಾ ಕೇರ್ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆಯಲ್ಲಿ ಐಸಿಯು ಮತ್ತು ಪ್ರಯೋಗಾಲಯ ಸೌಲಭ್ಯಗಳು ಸೇರಿದಂತೆ ಹಲವು ಆರೋಗ್ಯ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದರು.

ಇದರ ಜೊತೆಗೆ ಕೆರೂರು, ಮೆಳ್ಳಿಗೇರಿ-ಹಳಗಲಿ, ಸಾಸಲಟ್ಟಿ-ಶಿವಲಿಂಗೇಶ್ವರ-ಶಿರೂರು ಹಾಗೂ ಹಣವಾಲ ಏತ ನೀರಾವರಿ ಯೋಜನೆಗಳಿಗೆ ಅನುದಾನ ನೀಡಲಾಗಿದೆ.

ವಿಜ್ಞಾನ ಕೇಂದ್ರ ಹಾಗೂ ತಾರಾಲಯ ಸ್ಥಾಪನೆ, ರಸ್ತೆ ಮತ್ತು ನಾಗರಿಕ ಸೌಲಭ್ಯಗಳ ಅಭಿವೃದ್ಧಿಗೆ ವಿಶೇಷ ಅನುದಾನ, ರೈತರಿಗೆ ಶೂನ್ಯ ಬಡ್ಡಿದರ ಸಾಲ ಸೌಲಭ್ಯಗಳ ಮೂಲಕ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

### ಶಿರೂರಿನಲ್ಲಿ ಮನೆ ಮನೆಗೆ ಪ್ರಚಾರ; ಕಾಂಗ್ರೆಸ್ ಅಭ್ಯರ್ಥಿ ಪರ ಅಶೋಕ ಮಂದಾಲಿ ಮತಯಾಚನೆ

# ಬಡವರ ಆರ್ಥಿಕಾಭಿವೃದ್ಧಿಗೆ 'ಗ್ಯಾರಂಟಿ' ಯೋಜನೆಗಳು ಸಹಕಾರಿ



> "ನಮ್ಮ ಸರ್ಕಾರದ ಜನಪರ ಯೋಜನೆಗಳು ಜನರ ಜೀವನದಲ್ಲಿ ನೇರ ಬದಲಾವಣೆ ತಂದಿವೆ. ಸಾರ್ವಜನಿಕರಿಂದ ದೊರೆಯುತ್ತಿರುವ ಬೆಂಬಲ ನಮ್ಮ ವಿಶ್ವಾಸವನ್ನು ಇಮ್ಮಡಿಗೊಳಿಸಿದೆ."
> – **ಅಶೋಕ ಮಂದಾಲಿ,** ಗದಗ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ.

**■ ವಿಜಯಸಾಕ್ಷಿ ಸುದ್ದಿ, ಬಾಗಲಕೋಟೆ**

ಬಡವರ ಆರ್ಥಿಕಾಭಿವೃದ್ಧಿ ಹಾಗೂ ಮಹಿಳೆಯರ ಸಬಲೀಕರಣಕ್ಕೆ ರಾಜ್ಯ ಸರ್ಕಾರದ 'ಗ್ಯಾರಂಟಿ' ಯೋಜನೆಗಳು ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಗದಗ ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಹಾಗೂ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಬಾಗಲಕೋಟೆ ಜಿಲ್ಲೆಯ ಶಿರೂರು ಪಟ್ಟಣದಲ್ಲಿ ವಿಧಾನಸಭಾ ಉಪಚುನಾವಣೆಯ ಅಂಗವಾಗಿ ಮನೆ ಮನೆಗೆ ತೆರಳಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ ಮೇಟಿ ಪರ ಮತಯಾಚನೆ ನಡೆಸಿದ ವೇಳೆ ಅವರು ಮಾತನಾಡಿ, ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹ ಜ್ಯೋತಿ, ಶಕ್ತಿ ಹಾಗೂ ಯುವ ನಿಧಿ ಯೋಜನೆಗಳಡಿ ಲಕ್ಷಾಂತರ ಜನರಿಗೆ ನೇರ ಆರ್ಥಿಕ ನೆರವು ತಲುಪುತ್ತಿದೆ ಎಂದು ವಿವರಿಸಿದರು.

ಅನ್ನಭಾಗ್ಯ ಯೋಜನೆಯಡಿ 2,10,539 ಫಲಾನುಭವಿಗಳಿಗೆ ಪ್ರತಿ ತಿಂಗಳು 10 ಕೆ.ಜಿ. ಅಕ್ಕಿ ವಿತರಿಸಲಾಗುತ್ತಿದ್ದು, ಗೃಹಲಕ್ಷ್ಮಿ ಯೋಜನೆಯಡಿ 60,551 ಮಹಿಳೆಯರಿಗೆ ತಿಂಗಳಿಗೆ 2,000 ನೀಡಲಾಗುತ್ತಿದೆ ಎಂದರು.

ಗೃಹ ಜ್ಯೋತಿ ಯೋಜನೆಯಡಿ 81,506 ಕುಟುಂಬಗಳಿಗೆ 200 ಯುನಿಟ್ ಉಚಿತ ವಿದ್ಯುತ್ ಸೌಲಭ್ಯ ಒದಗಿಸಲಾಗಿದ್ದು, ಶಕ್ತಿ ಯೋಜನೆಯಡಿ 3.11 ಕೋಟಿಗೂ ಹೆಚ್ಚು ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದಾರೆ.

ಯುವ ನಿಧಿ ಯೋಜನೆಯಡಿ 2,180 ಫಲಾನುಭವಿಗಳಿಗೆ ತಿಂಗಳಿಗೆ 3,000 ನೀಡಲಾಗುತ್ತಿದೆ ಎಂದು ತಿಳಿಸಿದರು.

ಈ ಎಲ್ಲಾ ಯೋಜನೆಗಳ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಕೋಟ್ಯಾಂತರ ರೂಪಾಯಿ ಹೂಡಿಕೆ ಮಾಡಲಾಗಿದೆ ಎಂದು ಹೇಳಿದರು.

ಜಿಲ್ಲೆಯ ನೀರಾವರಿ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಐತಿಹಾಸಿಕ ಅನುದಾನ ನೀಡಿದ್ದು, ಅಪ್ಪರ್ ಕೃಷ್ಣಾ ಯೋಜನೆಗೆ ಸಾವಿರಾರು ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಆಲಮಟ್ಟಿ ಜಲಾಶಯದ ಎತ್ತರವನ್ನು ಹೆಚ್ಚಿಸುವ ಮೂಲಕ ನೀರಾವರಿ ಸಾಮರ್ಥ್ಯವನ್ನು ವಿಸ್ತರಿಸಲಾಗಿದೆ. ಫ್ಲೋರೈಡ್ ಸಮಸ್ಯೆ ಪರಿಹಾರ, ನವನಗರ ಪುನರ್ವಸತಿ, ಬಿಮ್ಸ್ ಆಸ್ಪತ್ರೆ ಅಭಿವೃದ್ಧಿ ಸೇರಿದಂತೆ ಹಲವಾರು ಕಾಮಗಾರಿಗಳು ಕೈಗೆತ್ತಿಕೊಳ್ಳಲಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಪಕ್ಷದ ಹಿರಿಯ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ ಎಂದು ಹೇಳಿದರು.

# ಎ.8ರಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ, ಈ ವರ್ಷ ಎಪ್ರಿಲ್ 20, 2026ರಂದು ಆಚರಿಸಲ್ಪಡುವ ಕರ್ನಾಟಕದ ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ನಿಮಿತ್ತ ಪೂರ್ವಭಾವಿ ಸಭೆಯನ್ನು ಎಪ್ರಿಲ್ 8ರಂದು (ಬುಧವಾರ) ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಅಪರ ಜಿಲ್ಲಾಧಿಕಾರಿಗಳು, ಗದಗ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಈ ಸಭೆಗೆ ಸ'ಂಬಂಧಿಸಿದ'ವ'ರ'ು ಹಾಜರಾಗಿ ತಮ್ಮ ಸಲಹೆ ಹಾಗೂ ಅಭಿಪ್ರಾಯಗಳನ್ನು ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಗದಗ:** ನಗರದ ಹಾತಲಗೇರಿ ರೋಡ್ ನ ವಿವೇಕಾನಂದ ನಗರದ ಶ್ರೀ ವೀರಾಂಜನೇಯ ದೇವಸ್ಥಾನದಲ್ಲಿ ಹನುಮ ಜಯಂತಿಯ ಅಂಗವಾಗಿ ವೀರಾಂಜನೇಯ ಮೂರ್ತಿಗೆ ವಿಶೇಷ ಅಲಂಕಾರ, ವಿಶೇಷ ಪೂಜೆ, ಅಭಿಷೇಕ ಮಾಡಲಾಗಿತ್ತು. ನಂತರ ತೊಟ್ಟಿಲೋತ್ಸವ, ಹನುಮಂತನ ಹೋಮಪೂಜೆ, ಸತ್ಯ ನಾರಾಯಣ ಪೂಜೆ, ಮಹಾ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು.

# ಸುಳ್ಳಿಗೆ ವೇಗವಿದ್ದರೆ ಸತ್ಯಕ್ಕೆ ಶಕ್ತಿಯಿದೆ

**ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ನಡೆದ ದವನದ ಹುಣ್ಣಿಮೆ ಧರ್ಮ ಸಮಾರಂಭದಲ್ಲಿ ರಂಭಾಪುರಿ ಜಗದ್ಗುರುಗಳು**



■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಸತ್ಯ ಹೇಳು ಧರ್ಮದಂತೆ ನಡೆ ಎಂದು ಶಾಸ್ತ್ರ ಹೇಳುತ್ತದೆ. ಆದರೆ ಇಂದು ಸುಳ್ಳು ಮೋಸ ಕಪಟತನ ತುಂಬಿ ತುಳುಕುತ್ತಿದೆ. ಸುಳ್ಳುಗಳಿಗೆ ವೇಗವಿರುವುದು ಎಷ್ಟು ನಿಜವೋ, ಸತ್ಯಕ್ಕೆ ಶಕ್ತಿ ಇರುವುದೂ ಅಷ್ಟೇ ಸತ್ಯವೆಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ದವನದ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ ಮಾತನಾಡಿದ ಶ್ರೀಗಳು, ಭಗವಂತ ಮಾಡಿದ ಸೃಷ್ಠಿಯನ್ನು ಕೆಡಿಸುವವರ ಸಂಖ್ಯೆ ಹೆಚ್ಚಿದೆ.

ಕೆಟ್ಟು ಹೋದುದನ್ನು ಸರಿಪಡಿಸುವವರ ಸಂಖ್ಯೆ ಬಹಳ ಕಡಿಮೆಯಿದೆ. ಸರಿಪಡಿಸುವ ಪ್ರಜ್ಞಾವಂತರ ಸಂಖ್ಯೆಯನ್ನು ಹೆಚ್ಚಿಸುವ ಕೆಲಸವಾಗಬೇಕಾಗಿದೆ ಎಂದರು.

ಇದೇ ವೇಳೆ ಸೋಲ್ಲಾಪುರ ದಕ್ಷಿಣ ತಾಲ್ಲೂಕಿನ ಶ್ರೀಮದ್ರಂಭಾಪುರಿ ಶಾಖಾ ಹಿರೇಮಠದ ನೂತನ ಪಟ್ಟಾಧ್ಯಕ್ಷರಾದ ಅಭಿನವ ಶಿವಾನಂದ ಶಿವಾಚಾರ್ಯ ಸ್ವಾಮಿಗಳಿಗೆ ಶ್ರೀ ಪೀಠದಿಂದ ಶ್ರೀ ಗುರು ಪಟ್ಟಾಧಿಕಾರದ ಸಂಪುಟ ಪತ್ರ ಪ್ರದಾನ ಮಾಡಿದರು. ಜೊತೆಗೆ 10 ಜನ ವೀರಮಾಹೇಶ್ವರ ವಟುಗಳಿಗೆ ಶಾಸ್ತ್ರೋಕ್ತವಾಗಿ ಶಿವದೀಕ್ಷಾ ಅಯ್ಯಾಚಾರ ಜರುಗಿತು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಕುಲಪತಿ ಬೆಳಗಾಲಪೇಟೆ ಹಿರೇಮಠ ಸಿದ್ಧಲಿಂಗ ಶಾಸ್ತ್ರಗಳು ವೈದಿಕ ಕಾರ್ಯಗಳನ್ನು ನೆರವೇರಿಸಿದರು. ಶ್ರೀ ಪೀಠದ ಎಲ್ಲ ದೈವಗಳಿಗೆ ಹುಣ್ಣಿಮೆ ವಿಶೇಷ ಪೂಜೆ ಜರುಗಿತು.

"ಬದುಕಿನಲ್ಲಿ ಸಾಧಿಸುವ ಗುರಿಯತ್ತ ಎಷ್ಟು ದೊಡ್ಡ ಹೆಜ್ಜೆ ಇಟ್ಟಿದ್ದೇವೆ ಎಂಬುದು ಮುಖ್ಯವಲ್ಲ. ಆತ್ಮವಿಶ್ವಾಸದಿಂದ ಮೊದಲ ಹೆಜ್ಜೆ ಇಡುವುದು ಬಹಳ ಮುಖ್ಯ. ಬಡತನ ಬಂದಿದೆ ಎಂದು ಕುಗ್ಗಬೇಡ, ಸಿರಿತನ ಬಂದಿದೆ ಎಂದು ಉಬ್ಬಬೇಡ. ಕತ್ತಲೆ ಸರಿದ ಮೇಲೆ ಬೆಳಕು ಬರುತ್ತದೆ ಎಂಬ ನಂಬಿಕೆ ಇರಲಿ. ವೀರಶೈವ ಧರ್ಮ ಸಂಸ್ಕೃತಿಯಲ್ಲಿ ಶ್ರಮ ಜೀವನಕ್ಕೆ ಬಹಳಷ್ಟು ಮಹತ್ವವಿದೆ ಎಂಬುದನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಲ್ಲಿ ಬೋಧಿಸಿದ್ದಾರೆ"

**– ರಂಭಾಪುರಿ ಶ್ರೀಗಳು.**

### ಅರಣ್ಯ ವಾಸಿಗಳಿಗೆ ಬದುಕಲು ಅವಕಾಶ ಕೊಡಿ

ಮಲೆನಾಡಿನ ಪ್ರಾಂತದಲ್ಲಿ ಅಲ್ಲಲ್ಲಿ ಅರಣ್ಯ ವಾಸಿಗಳು ನೆಲೆಸಿರುತ್ತಾರೆ. ಅರಣ್ಯ ವಾಸಿಗಳನ್ನು ಒಕ್ಕಲೆಬ್ಬಿಸಿ ತೊಂದರೆ ಕೊಡುವುದನ್ನು ಸರ್ಕಾರ ಕೈಬಿಡಬೇಕು. ಮೂರು ತಲೆಮಾರಿನ ದಾಖಲೆಯ ಷರತ್ತನ್ನು ಕೈಬಿಡಬೇಕೆಂದು ಶ್ರೀ ರಂಭಾಪುರಿ ಜಗದ್ಗುರುಗಳು ಸರ್ಕಾರಕ್ಕೆ ಒತ್ತಾಯಿಸಿದರು.

'ಅರಣ್ಯ ಹಕ್ಕು ಕಾಯಿದೆ ಅಡಿಯಲ್ಲಿ ಪಾರಂಪರಿಕ ಅರಣ್ಯವಾಸಿಗಳ ಸಾಗುವಳಿ ಹಕ್ಕಿಗೆ ಮೂರು ತಲೆಮಾರಿನ ವೈಯಕ್ತಿಕ ದಾಖಲೆಗೆ ಒತ್ತಾಯಿಸತಕ್ಕದ್ದಲ್ಲ' ಎಂಬ ವಿಷಯದ ಕುರಿತು ಅರಣ್ಯವಾಸಿಗಳು ನಡೆಸುವ ಜಾಥಾದ ಕರಪತ್ರವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಗುರುವಾರ ಬಿಡುಗಡೆ ಮಾಡುವ ಮೂಲಕ ಚಾಲನೆ ನೀಡಿ ಮಾತನಾಡುತ್ತ, ಈ ಜಾಥಾ ಎಲ್ಲೆಡೆ ನಡೆಯುತ್ತಿದೆ. ಅರಣ್ಯಾಧಿಕಾರಿಗಳು ಮತ್ತು ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ ಸಮಸ್ಯೆಯನ್ನು ಪರಿಹರಿಸಬೇಕೆಂದು ಆಗ್ರಹಿಸಿದರು.

ಸಹಸ್ರಾರು ಭಕ್ತರು ಪಾಲ್ಗೊಂಡು ದರ್ಶನ ಆಶೀರ್ವಾದ ಪಡೆದರು

# ಮೇ.10ರಂದು ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ

**ಐದು ಜಗದ್ಗುರುಗಳ ಐತಿಹಾಸಿಕ ಸಮಾಗಮ; ನೂತನ ರಥ ಲೋಕಾರ್ಪಣೆ ವಿಶೇಷ**



■ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ತಾಲೂಕಿನ ಸೂಡಿ ಗ್ರಾಮದಲ್ಲಿ ಇದೇ ಮೊದಲ ಬಾರಿಗೆ ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ, 50ನೇ ವರ್ಷದ ರಥೋತ್ಸವದ ಅಂಗವಾಗಿ ನೂತನ ರಥ ಲೋಕಾರ್ಪಣೆ ಸೇರಿದಂತೆ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಮೇ 6ರಿಂದ 10ರವರೆಗೆ ಭರ್ಜ-ರಿಯಾಗಿ ನಡೆಯಲಿವೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ತಿಳಿಸಿದ್ದಾರೆ.

ನಗರದ ಎಪಿಎಂಸಿ ಬಳಿಯ ಶರಣಬಸವ (ರಾಜು) ಗುಡಿಮನಿ ಅವರ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ವೀರಶೈವ ಧರ್ಮ ಪರಂಪರೆಯ ಮೂಲ ಆಚಾರ್ಯರೇ ಪಂಚಪೀಠದ ಪರಮಾಚಾರ್ಯರಾಗಿದ್ದು, ಕಾಶೀ ಪೀಠದ ಶಾಖಾ ಮಠವೇ ಸೂಡಿಯ ಶ್ರೀ ಜುಕ್ತಿಹಿರೇಮಠವಾಗಿದೆ ಎಂದರು.

ಪ್ರಸ್ತುತ ಪೀಠಾಧ್ಯಕ್ಷರಾದ ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು 14ನೇ ಪೀಠಾಧ್ಯಕ್ಷರಾಗಿದ್ದು, ಅವರ ಅವಧಿಯಲ್ಲಿ 2017ರಲ್ಲಿ ನೂತನ ಮಠ ಲೋಕಾರ್ಪಣೆಗೊಂಡಿದೆ. ಇದೀಗ ನೂತನ ರಥ ಲೋಕಾರ್ಪಣೆ ನಡೆಯುತ್ತಿರುವುದು ಸಂತಸದ ವಿಷಯವಾಗಿದ್ದು, "ಘಟದಿಂದ ಮಠ" ಪರಿಕಲ್ಪನೆಗೆ ಜುಕ್ತಿಹಿರೇಮಠವೇ ಸಾಕ್ಷಿಯಾಗಿದೆ ಎಂದು ತಿಳಿಸಿದರು.

ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ನಡೆದ ಸಭೆಯಲ್ಲಿ ಎಸ್.ಪಿ. ಸಂಶಿಮಠ, ಸಿದ್ದಣ್ಣ ಮಾರನಬಸರಿ, ಎಚ್.ಎಸ್. ಶಿವನಗೌಡರ, ರಾಜು ಕುರಡಗಿ, ಶರಣಪ್ಪ ಕುರಡಗಿ, ಸದಾಶಿವಯ್ಯ ಮದರಿಮಠ, ರಾಜು ಗುಡಿಮನಿ, ಚಂದ್ರು ಬಾಳಿಹಳ್ಳಿಮಠ, ಮಲ್ಲಿಕಾರ್ಜುನ ಸಂತೋಜಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ಮಹೋತ್ಸವವನ್ನು ಅದ್ದೂರಿಯಾಗಿ ನಡೆಸಲು ನಿರ್ಧರಿಸಿದರು. ವಿಜಯಲಕ್ಷ್ಮಿ ಮಾನ್ವಿ, ಜಯಶ್ರೀ ತಾತನಗೌಡ ಸೇರಿದಂತೆ ಮಹಿಳೆಯರೂ ಭಾಗವಹಿಸಿದರು.

ಮೇ 6ರಂದು ಉಚಿತ ಆರೋಗ್ಯ ತಪಾಸಣೆ, ಕಣ್ಣಿನ ತಪಾಸಣೆ ಹಾಗೂ ರಕ್ತದಾನ ಶಿಬಿರ ನಡೆಯಲಿದ್ದು, ಸಂಜೆ ಹುಬ್ಬಳ್ಳಿಯ ಜಿ.ವಿ. ಕಲಾಬಳಗದಿಂದ ನಾಟಕ ಪ್ರದರ್ಶನ ಜರುಗಲಿದೆ.

ಮೇ 7ರಂದು ಕೃಷಿ ಮತ್ತು ಪರಿಸರ ಜಾಗೃತಿ ಕಾರ್ಯಕ್ರಮ, ಮೇ 8ರಂದು ಮಹಿಳಾ ಜಾಗೃತಿ ಸಮಾರಂಭ, ಮೇ 9ರಂದು ಯುವಕರಿಗಾಗಿ ವ್ಯಸನಮುಕ್ತ ಸಮಾಜ ನಿರ್ಮಾಣ ಶಿಬಿರ ಹಾಗೂ ಹಾಸ್ಯೋತ್ಸವ ನಡೆಯಲಿದೆ.

ಮೇ 10ರಂದು ಬೆಳಿಗ್ಗೆ 9 ಗಂಟೆಗೆ ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ನಡೆಯಲಿದ್ದು, ಮಧ್ಯಾಹ್ನ 12ಕ್ಕೆ ಧರ್ಮ ಸಂರಕ್ಷಣಾ ಸಮಾರಂಭ, ಶ್ರೀಮಠ ಪ್ರಶಸ್ತಿ ಪ್ರದಾನ ಹಾಗೂ ನೂತನ ರಥ ಲೋಕಾರ್ಪಣೆ ನೆರವೇರಲಿದೆ.

ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಪೀಠಾಧ್ಯಕ್ಷರು ಮನವಿ ಮಾಡಿದ್ದಾರೆ.

### ಅಪರೂಪದ ಐತಿಹಾಸಿಕ ಕ್ಷಣ

ಸೂಡಿ ಗ್ರಾಮದಲ್ಲಿ ಪಂಚಪೀಠಾಧೀಶ್ವರ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಇದೇ ಮೊದಲ ಬಾರಿಗೆ ನಡೆಯುತ್ತಿದ್ದು, ಒಂದೇ ವೇಳೆ ಐದು ಜಗದ್ಗುರುಗಳು ಭಾಗವಹಿಸುವುದು ಕಳೆದ 25 ವರ್ಷಗಳಲ್ಲಿ ಅಪರೂಪದ ಘಟನೆಯಾಗಿದೆ ಎಂದು ಡಾ. ಕೊಟ್ಟೂರ ಬಸವೇಶ್ವರ ಶಿವಾಚಾರ್ಯರು ತಿಳಿಸಿದ್ದಾರೆ.

# ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಸಿದ್ಧಲಿಂಗ ನಗರ, ಗದಗ, ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆಯಲ್ಲಿ, ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳವರ ಅಪ್ಪಣೆ ಮೇರೆಗೆ 2026-27 ನೇ ಸಾಲಿನ ಕಾರ್ಯಕಾರಿ ಮಂಡಳಿ ಹಾಗೂ ವಿವಿಧ ಸಮಿತಿಗಳ ಸದಸ್ಯರ ಆಯ್ಕೆ ಮಾಡಲಾಗಿದೆ.

ಗೌರವಾಧ್ಯಕ್ಷರಾಗಿ ಅನ್ನಪೂರ್ಣ ವರವಿ, ಅಧ್ಯಕ್ಷರಾಗಿ ವಿಜಯಲಕ್ಷ್ಮೀ ಆನೆಹೊಸೂರು, ಕಾರ್ಯದರ್ಶಿಯಾಗಿ ಕವಿತಾ ಮರಿಗೌಡರ, ಕೋಶಾಧ್ಯಕ್ಷರಾಗಿ ಜಯಶ್ರೀ ಡಾವಣಗೇರಿ, ಮತ್ತು ಶಾಂತಾ ಬಿ. ಕುಂದಗೋಳ, ವೀಣಾ ಅಕ್ಕಿ, ಪ್ರೇಮಾ ಗಾಣಿಗೇರ, ಶಂಕ್ರಮ್ಮ ಮಾಳಶೆಟ್ಟಿ, ಪ್ರತಿಭಾ ಇನಾಮತಿ ಮೊದಲಾದ ಸದಸ್ಯರು ವಿವಿಧ ಸಮಿತಿಗಳಲ್ಲಿ ಆಯ್ಕೆಯಾಗಿದ್ದಾರೆ. ಸಂಘಟನಾ ಕಾರ್ಯದರ್ಶಿಯಾಗಿ ವೀಣಾ ಮಾಲಿಪಾಟೀಲ, ಸಲಹಾ ಸಮಿತಿಗೆ ಶಾಂತಾ ಮುಂದಿನಮನಿ, ಸಂಗೀತಾ ನಾಕೋಡ್ ಮೊದಲಾದವರು ನೇಮಕಗೊಂಡಿದ್ದಾರೆ.

ಆಯ್ಕೆಯಾದ ಪದಾಧಿಕಾರಿಗಳು ಮತ್ತು ಸದಸ್ಯರು ಸ್ವತಃ ಸೇವಾ ಮನೋಭಾವದಿಂದ, ಕೇಂದ್ರದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತೇವೆ ಎಂದು ಪ್ರತಿಜ್ಞಾವಿಧಿ ಮೂಲಕ ಪ್ರಮಾಣೀಕರಿಸಿದ್ದಾರೆ. ಕೇಂದ್ರದ ಸಂಯೋಜಕರು ಮತ್ತು ಹಿತೈಷಿಗಳು ಆಯ್ಕೆಯಾದ ಎಲ್ಲರಿಗೂ ಅಭಿನಂದನೆ ತಿಳಿಸಿದ್ದಾರೆ.

# ಥ್ರಿಲ್ಲರ್, ಹಾರರ್, ದೈವಭಕ್ತಿಯ 'ಕೊಹಿನೂರು' ಚಿತ್ರದ ಚಿತ್ರೀಕರಣ ಆರಂಭ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಎಸ್.ಪಿ.ಜಿ. ಸಿನಿಮಾಸ್ ಅವರ 'ಕೊಹಿನೂರು' ಚಿತ್ರದ ಅಡಿ ಬರಹ 'ದ ಮಿರಾಕಲ್ ಡೈಮಂಡ್' ಎಂಬ ಕನ್ನಡ ಚಲನಚಿತ್ರದ ಮುಹೂರ್ತ ಸಮಾರಂಭವು ಹಾರೋಹಳ್ಳಿಯ ಶ್ರೀ ಚಾಮುಂಡೇಶ್ವರಿ ದೇವಸ್ಥಾನದಲ್ಲಿ ವಿಜೃಂಭಣೆಯಾಗಿ ನೆರವೇರಿತು.

ಥ್ರಿಲ್ಲರ್, ಹಾರರ್, ದೈವಭಕ್ತಿ ಮತ್ತು ಶಕ್ತಿಯನ್ನು ಒಳಗೊಂಡಿರುವ ಚಿತ್ರಕ್ಕೆ ಪ್ರಿಯಾ ದರ್ಶನ, ಸಂತೋಷ್ ಕ್ಯಾಮೆರಾ ಚಾಲನೆ ಮಾಡುವ ಮೂಲಕ ಚಿತ್ರೀಕರಣಕ್ಕೆ ಚಾಲನೆ ನೀಡಿದರೆ. ಶ್ರೀಮತಿ ಭಾನುಮತಿ ಗಜೇಂದ್ರ ಕ್ಲಾಪ್ ಮಾಡಿದರು. ಮುಹೂರ್ತಕ್ಕೆ ಆಗಮಿಸಿದ ಗಣ್ಯರು ಚಿತ್ರ ತಂಡಕ್ಕೆ ಶುಭ ಕೋರಿದರು.

ಚಿತ್ರದಲ್ಲಿ ಒಟ್ಟು ಐದು ಹಾಡುಗಳು, ನಾಲ್ಕು ಸಾಹಸ ದೃಶ್ಯಾವಳಿಗಳಿವೆ. ಸದ್ಯ ಸತತ ಚಿತ್ರೀಕರಣ ನಡೆಸುತ್ತಿದ್ದು ಒಂದೇ ಹಂತದಲ್ಲಿ ಚಿತ್ರೀಕರಣವನ್ನು ಮುಗಿಸುವ ಯೋಜನೆಯನ್ನು ಹಾಕಿದ್ದೇವೆ. ಈ ಕಥೆಯನ್ನು ಚಿತ್ರಮಂದಿರದಲ್ಲೇ ಪ್ರೇಕ್ಷಕರು ನೋಡಬೇಕು ಎನ್ನುವ ಉದ್ದೇಶದಿಂದ ಇಲ್ಲಿ ಅದರ ಸಾರ ಹೇಳುತ್ತಿಲ್ಲ. ಸದ್ಯ ಹಾರೋಹಳ್ಳಿಯ ಸುತ್ತಮುತ್ತ ಚಿತ್ರೀಕರಣ ನಡೆಸಿದ್ದೇವೆ ಎಂದು ನಿರ್ದೇಶಕರಾದ ಕೆ. ಸುರೇಶ್ ಗೋಸ್ವಾಮಿ ಹೇಳಿದರು.

ತಾರಾಗಣದಲ್ಲಿ ಭಾವನ, ರುದ್ರಾಕ್ಷ, ಜೀವನ್, ಹಿಮ, ನವೀನ್, ತನು, ಪ್ರಸಾದ್, ಸುನಿಲ್ ಕುಮಾರ್, ಶ್ರೀಕಾಂತ್, ವಿನಯ್, ಈ.ಎಸ್. ರವಿ, ಮಾದೇಗೌಡ, ತ್ಯಾಗ ಮೊದಲಾದವರು ಅಭಿನಯಿಸುತ್ತಿದ್ದು, ಕ್ಯಾಮೆರಾ ರಾಜ ಶಿವಶಂಕರ್, ಈ ಚಿತ್ರದ ಕಥೆ ಬರೆಯುವದರೊಂದಿಗೆ ರಾಜಂ. ಅರ್. ಇ. ಗಜೇಂದ್ರ ಅವರು ನಿರ್ಮಾಪಕರೂ ಆಗಿದ್ದಾರೆ. ಸಾಹಸ ನಿರ್ದೇಶನ ಸುಪ್ರೀಂ ಸುಬ್ಬು, ಸಂಗೀತ ದಿವಾಕರ್, ಸಂಕಲನ ದುರ್ಗಾ ಪ್ರಸಾದ್, ಪತ್ರಿಕಾ ಸಂಪರ್ಕ ಕಾರ್ತಿಕ ಸುಧನ್, ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ಸುರೇಶ, ಧೀರನ್, ಆನಂದ್, ಹರಿಹರನ್ ಬಿ.ಪಿ ಸಹನಿರ್ದೇಶಕರಾಗಿದ್ದು, ಸಹ ನಿರ್ಮಾಪಕರಾಗಿ ಪ್ರಿಯಾ ದರ್ಶನ ರವರು ಬಂಡವಾಳ ಹೂಡಿದ್ದಾರೆ. ಚಿತ್ರವನ್ನು ಆದಷ್ಟು ಬೇಗ ತೆ-ರೆಗೆ ತರುವುದಾಗಿ ನಿರ್ಮಾಪಕರು ತಿಳಿಸಿದ್ದಾರೆ.



# ಕ್ರೀಡೆ ಮನಸ್ಸುಗಳನ್ನು ಬೆಸೆಯುವ ಸೇತುವೆ

**ಚಿಲಗೋಡು ಗ್ರಾಮದಲ್ಲಿ ಸಿಪಿಎಲ್ ಕ್ರಿಕೆಟ್ ಟೂರ್ನಿಗೆ ಅಶೋಕ್ ನಾಯ್ಕ ಚಾಲನೆ**



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕ್ರೀಡೆ ಮನುಷ್ಯರ ನಡುವೆ ಪರಸ್ಪರ ಮನಸ್ಸುಗಳನ್ನು ಬೆಸೆಯುವ ಸೇತುವೆಯಾಗಿದ್ದು, ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ವೃದ್ಧಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ್ ನಾಯ್ಕ ಅಭಿಪ್ರಾಯಪಟ್ಟರು.

ತಾಲೂಕಿನ ಚಿಲಗೋಡು ಗ್ರಾಮದಲ್ಲಿ ಆಯೋಜಿಸಲಾದ ಸಿಪಿಎಲ್ ಕ್ರಿಕೆಟ್ ಟೂರ್ನಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಯುವಕರು ಜೀವನದಲ್ಲಿಯೂ ಹಾಗೂ ಕ್ರೀಡೆಯಲ್ಲಿ ಸೋಲು-ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಸಾಧನೆ ಮಾಡಬೇಕು. ಪ್ರತಿನಿತ್ಯ ಕ್ರೀಡೆಯಲ್ಲಿ ಭಾಗವಹಿಸಿದರೆ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ ಎಂದು ಹೇಳಿದರು.

ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪ ಮಾತನಾಡಿ, ಹಿಂದಿನ ಅವಧಿಯಲ್ಲಿ ಶಾಸಕ ಎಸ್. ಭೀಮನಾಯ್ಕ ಅವರು ತಾಲೂಕಿನಲ್ಲಿ ನಿರ್ಮಿಸಿದ ಸುಸಜ್ಜಿತ ಕ್ರೀಡಾಂಗಣವು ಕ್ರೀಡಾ ಚಟುವಟಿಕೆಗಳಿಗೆ ಬಹಳ ಸಹಕಾರಿಯಾಗಿದೆ ಎಂದರು.

ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಗೋಣಿಬಸಪ್ಪ ಮಾತನಾಡಿದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಉಪ್ಪಾರ ಬಾಳಪ್ಪ, ಚಿಂತ್ರಪಳ್ಳಿ ಮಂಜುನಾಥ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಗುರುಬಸವರಾಜ ಸೊನ್ನದ್, ಎಪಿಎಂಸಿ ಮಾಜಿ ನಿರ್ದೇಶಕ ಬಾಲಕೃಷ್ಣಬಾಬು, ಮುಖಂಡರಾದ ಕುರಿ ನಾಗರಾಜ, ಪರಶುರಾಮ, ಕಾಡಪ್ಪ, ಉತ್ತಂಗಿ ಭೀಮಪ್ಪ, ಬಸವರಾಜ, ಚಿಗರಿ ಹನುಂತಪ್ಪ, ಮೈಲಪ್ಪ, ಹರೀಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.ಆಯೋಜಕ ತಂಡವಾದ ಶ್ರೀ ಕೃಷ್ಣ ಗ್ರೂಪ್‌ನ ಸಂದೀಪ್, ಮಿಥುನ, ಚೌಟಿ ಬಸವರಾಜ, ಸಂಪತ್ ಸೇರಿದಂತೆ ಇತರರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

"ಕ್ರೀಡೆಯಿಂದ ಆರೋಗ್ಯವೂ ಬೆಳೆದು, ಮನಸ್ಸುಗಳೂ ಒಂದಾಗುತ್ತವೆ"

– **ಅಶೋಕ್ ನಾಯ್ಕ**, ಯುವ ಕಾಂಗ್ರೆಸ್ ಅಧ್ಯಕ್ಷ,

# ಕಾಲೇಜು ವಿದ್ಯಾರ್ಥಿಗಳಿಂದ ಪಕ್ಷಿಗಳ ರಕ್ಷಣೆ ಅಭಿಯಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಕೆ.ವಿ. ಹಂಚಿನಾಳ ಕಾಲೇಜ್ ಆಫ್ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜ್ ವಿದ್ಯಾರ್ಥಿಗಳು ತಮ್ಮ ಸಂಸ್ಥೆಯ ಆವರಣದಲ್ಲಿ ಸಂಭವಿಸಿದ ಪಕ್ಷಿ ಸಾವಿನ ಘಟನೆಗೆ ತೀವ್ರವಾಗಿ ಪ್ರತಿಕ್ರಿಯಿಸಿದರು. ಈ ಘಟನೆ ಅವರ ಮನಸ್ಸಿಗೆ ಗಂಭೀರ ಸಂದೇಶವನ್ನಿಟ್ಟಿತು ಮತ್ತು ತಕ್ಷಣವೇ ಪಕ್ಷಿಗಳನ್ನು ರಕ್ಷಿಸುವ ಅಭಿಯಾನವನ್ನು ಪ್ರಾರಂಭಿಸಿದರು.

ವಿದ್ಯಾರ್ಥಿಗಳು ಬೇಸಿಗೆ ಹಿನ್ನೆಲೆಯಲ್ಲಿ ಪಕ್ಷಿಗಳಿಗೆ ಅಗತ್ಯವಾದ ನೀರು ಮತ್ತು ಆಹಾರವನ್ನು ನಿಯಮಿತವಾಗಿ ಒದಗಿಸಲು ವ್ಯವಸ್ಥೆ ಮಾಡಿದ್ದಾರೆ. "ಬದುಕಿರಿ, ಬದುಕಿಸಿರಿ" ಎಂಬ ಧ್ಯೇಯವಾಕ್ಯವನ್ನು ಮುಂದುಡಿಸಿಕೊಂಡು, ಪ್ರತಿದಿನ ಪಕ್ಷಿಗಳನ್ನು ಗಮನಿಸುವ ಮೂಲಕ ಪರಿಸರ ಪ್ರಜ್ಞೆಯನ್ನು ಉತ್ತೇಜಿಸಿದರು.

ಈ ಕಾರ್ಯದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ, ಪ್ರಾಂಶುಪಾಲರು, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದ ಎಲ್ಲ ಸದಸ್ಯರೂ ಸಕ್ರಿಯವಾಗಿ ಪಾಲ್ಗೊಂಡು ಸಮಗ್ರ ತಂಡದ ಶಕ್ತಿಯನ್ನು ತೋರಿದರು. ಈ ಅಭಿಯಾನವು ಸ್ಥಳೀಯ ಸಮುದಾಯದ ಪರಿಸರ ಜಾಗೃತಿ ಮತ್ತು ಪಕ್ಷಿ ರಕ್ಷಣೆಯಲ್ಲಿ ಮಹತ್ವಪೂರ್ಣ ಮಾದರಿಯಾಗಿಯೇ ಪರಿಣಮಿಸಿದೆ.

# ಸಮಾಜದ ಶಾಂತಿ, ಭದ್ರತೆ ಕಾಪಾಡುವಲ್ಲಿ ಪೊಲೀಸರ ಪಾತ್ರ ಮಹತ್ವದ್ದು

## ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಎಸ್ಪಿ ರೋಹನ್ ಜಗದೀಶ್

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪೊಲೀಸ್ ಇಲಾಖೆಯ ವತಿಯಿಂದ ಗುರುವಾರ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನ (ಪಿ.ಎಚ್.ಕ್ಯೂ), ಮಲ್ಲಸಮುದ್ರದಲ್ಲಿ ಪೊಲೀಸ್ ಧ್ವಜ ದಿನಾಚರಣೆಯನ್ನು ಶಿಸ್ತಿನಿಂದ ಹಾಗೂ ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಎ.ಎಸ್.ಐ. ಎಚ್.ಡಿ. ಗಡಾದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ, ಪೊಲೀಸ್ ಇಲಾಖೆ ಸಮಾಜದ ಶಾಂತಿ, ಸುವ್ಯವಸ್ಥೆ ಮತ್ತು ಭದ್ರತೆಯನ್ನು ಕಾಪಾಡುವ ಪ್ರಮುಖ ಕಂಬವಾಗಿದೆ ಎಂದರು. ಅಪರಾಧ ನಿಯಂತ್ರಣದೊಂದಿಗೆ ಜನರಲ್ಲಿ ಭದ್ರತಾ ಭಾವನೆ ಮೂಡಿಸುವುದು ಪೊಲೀಸರ ಪ್ರಮುಖ ಕರ್ತವ್ಯವಾಗಿದ್ದು, ಇಲಾಖೆ ಇದನ್ನು ಶಿಸ್ತುಬದ್ಧವಾಗಿ ನಿರ್ವಹಿಸುತ್ತಿದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಅವರು ಮಾತನಾಡಿ, ಪೊಲೀಸ್ ಧ್ವಜ ದಿನಾಚರಣೆಯ ಉದ್ದೇಶ ಮತ್ತು ಮಹತ್ವವನ್ನು ವಿವರಿಸಿದರು. 1965ರ ಜನವರಿ 15ರಿಂದ ಈ ದಿನಾಚರಣೆ ನಡೆದು ಬರುತ್ತಿದ್ದು, ಪೊಲೀಸ್ ಧ್ವಜವು ಶೌರ್ಯ, ತ್ಯಾಗ ಮತ್ತು ಕರ್ತವ್ಯನಿಷ್ಠೆಯ ಸಂಕೇತವಾಗಿದೆ ಎಂದರು.




ನಿವೃತ್ತ ಪೊಲೀಸ್ ಅಧಿಕಾರಿಗಳನ್ನು ಗೌರವಿಸುವ ಸಂಪ್ರದಾಯವೂ ಇದರ ಭಾಗವಾಗಿದೆ. ಧ್ವಜ ಮಾರಾಟದಿಂದ ಸಂಗ್ರಹವಾಗುವ ಮೊತ್ತದಲ್ಲಿ ಶೇ.50ರಷ್ಟು ಕೇಂದ್ರ ಮೀಸಲು ಪಡೆಗೆ ಹಾಗೂ ಶೇ.50ರಷ್ಟು ರಾಜ್ಯದ ನಿವೃತ್ತ ಪೊಲೀಸ್ ನಿಧಿಗೆ ಬಳಸಲಾಗುತ್ತಿದ್ದು, ಇದರಿಂದ ಅನೇಕರಿಗೆ ನೆರವು ದೊರೆಯುತ್ತಿದೆ ಎಂದು ತಿಳಿಸಿದರು. ಪೊಲೀಸರು ಅಪರಾಧ ತಡೆ, ಕಾನೂನು ಸುವ್ಯವಸ್ಥೆ ಕಾಪಾಡುವುದು, ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವುದು, ತುರ್ತು ಸಂದರ್ಭಗಳಲ್ಲಿ ತಕ್ಷಣ ಸ್ಪಂದಿಸುವುದು ಹಾಗೂ ಮಹಿಳೆಯರು ಮತ್ತು ಮಕ್ಕಳ ರಕ್ಷಣೆಯಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದಾರೆ. ಕೋವಿಡ್ ಸೇರಿದಂತೆ ಅನಾಹುತ ಸಂದರ್ಭಗಳಲ್ಲಿಯೂ ಪೊಲೀಸ್ ಸಿಬ್ಬಂದಿ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸಿ ಜನರ ರಕ್ಷಣೆಗೆ ಶ್ರಮಿಸಿರುವುದು ಗಮನಾರ್ಹ ಎಂದು ಹೇಳಿದರು.

> "ಪೊಲೀಸ್ ಧ್ವಜವು ಶೌರ್ಯ, ತ್ಯಾಗ ಮತ್ತು ಕರ್ತವ್ಯನಿಷ್ಠೆಯ ಪ್ರತೀಕ. ಸಮಾಜದ ಶಾಂತಿ ಮತ್ತು ಭದ್ರತೆ ಕಾಪಾಡುವಲ್ಲಿ ಪೊಲೀಸರ ಪಾತ್ರ ಅತ್ಯಂತ ಮಹತ್ವದ್ದಾಗಿದೆ."
> – ರೋಹನ್ ಜಗದೀಶ್, ಜಿಲ್ಲಾ ಪೊಲೀಸ್ ಅಧೀಕ್ಷಕ.



ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಮಹಾಂತೇಶ ಸಜ್ಜನರ, ನರಗುಂದ ಡಿ.ವೈ.ಎಸ್.ಪಿ. ಪ್ರಭುಗೌಡ ಕೆರೆದಳ್ಳಿ, ಸಂಜನಾ ರೋಹನ್ ಜಗದೀಶ್, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್. ಎನ್. ಬಳ್ಳಾರಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಹಿರಿಯ ಹಾಗೂ ಕಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮವು ಶಿಸ್ತಿನ ವಾತಾವರಣದಲ್ಲಿ ಯಶಸ್ವಿಯಾಗಿ ನೆರವೇರಿತು.



ಶಿರಹಟ್ಟಿ: ತಹಸೀಲ್ದಾರ್ ಕಚೇರಿಯಲ್ಲಿ ತಾಲೂಕಾ ಆಡಳಿತದ ವತಿಯಿಂದ ಶಿವಶರಣೆ ಅಕ್ಕಮಹಾದೇವಿ ಜಯಂತಿ ನಿಮಿತ್ತ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ತಹಸೀಲ್ದಾರ್ ಕೆ. ರಾಘವೇಂದ್ರ ರಾವು, ಗ್ರೇಡ್-2 ತಹಸೀಲ್ದಾರ್ ಎ.ಎ. ಮುಳಗುಂದಮಠ ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಶಿರಹಟ್ಟಿಯಲ್ಲಿ ಸಡಗರದ ಹನುಮ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಹನುಮ ಜಯಂತಿಯ ಅಂಗವಾಗಿ ಪೇಟೆ ಶ್ರೀ ಹನುಮಂತ ದೇವರ ದೇವಸ್ಥಾನದಲ್ಲಿ ವಿಶೇಷ ಪೂಜೆ-ಪುನಸ್ಕಾರಗಳೊಂದಿಗೆ ಅಪಾರ ಭಕ್ತ ಸಮೂಹದೊಂದಿಗೆ ಸಡಗರ ಸಂಭ್ರಮದಲ್ಲಿ ಹನುಮ ಜಯಂತಿಯನ್ನು ಆಚರಣೆ ಮಾಡಲಾಯಿತು.

ಬೆಳಿಗ್ಗೆ ಹನುಮಂತ ದೇವರಿಗೆ ವಿಶೇಷ ಪೂಜೆ, ತದನಂತರ ತೊಟ್ಟಿಲೋತ್ಸವ ಕಾರ್ಯಕ್ರಮ ಅತ್ಯಂತ ಸಡಗರದಿಂದ ನಡೆಯಿತು. ಬೆಳಿಗ್ಗೆಯಿಂದಲೇ ಭಕ್ತರು ದೇವಸ್ಥಾನಕ್ಕೆ ಆಗಮಿಸಿ ದೇವರ ದರ್ಶನವನ್ನು ಪಡೆದುಕೊಂಡರು. ಮಹಿಳೆಯರು ಭಕ್ತಿ-ಭಾವದಿಂದ ತೊಟ್ಟಿಲೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದು, ಮಧ್ಯಾಹ್ನ ಅನ್ನದಾಸೋಹ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ನೂರಾರು ಭಕ್ತರು ಸ್ವಯಂ ಪ್ರೇರಿತರಾಗಿ ಜಯಂತಿಯಲ್ಲಿ ಭಾಗಿಯಾಗಿದ್ದರು. ಶುಕ್ರವಾರ ದೇವಸ್ಥಾನದಲ್ಲಿ ಪವಮಾನ ಹೋಮ ಜರುಗಲಿದೆ.

ಪಟ್ಟಣದ ಕೋಟೆ (ಕಿಲ್ಲಾ) ಓಣಿಯಲ್ಲಿಯ ಶ್ರೀ ಹನುಮಂತ ದೇವರ ದೇವಸ್ಥಾನದಲ್ಲಿಯೂ ಸಹ ಅಖಂಡ ಶ್ರೀ ರಾಮನಾಮ ಸಪ್ತಾಹ ಕಾರ್ಯಕ್ರಮವು ಅಪಾರ ಭಕ್ತ ಸಮೂಹದೊಂದಿಗೆ ಸಡಗರ ಸಂಭ್ರಮದಲ್ಲಿ ಜರುಗಿತು.



# ಅಕ್ಕಮಹಾದೇವಿ ಸ್ವಾಭಿಮಾನದ ಸಂಕೇತ: ಬಿ.ಜಿ ಶಿರ್ಸಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್

ಅಕ್ಕಮಹಾದೇವಿ ಅವರು ಮಹಿಳಾ ಸ್ವಾತಂತ್ರ್ಯ, ಆತ್ಮಸಾಕ್ಷಾತ್ಕಾರ ಮತ್ತು ಭಕ್ತಿಯ ಪ್ರತೀಕ. ಅವರ ವಚನಗಳಲ್ಲಿ ವ್ಯಕ್ತವಾಗುವ ಧೈರ್ಯ ಮತ್ತು ವೈರಾಗ್ಯ ಇಂದಿಗೂ ಸಮಾಜಕ್ಕೆ ದಾರಿ ತೋರಿಸುವ ಬೆಳಕು. ಅಕ್ಕನವರ ಸಾಹಿತ್ಯವು ಕೇವಲ ಭಕ್ತಿಯಲ್ಲ, ಅದು ಜೀವನದ ಸತ್ಯವನ್ನು ಅರಿಯುವ ಸಾಧನವಾಗಿದೆ ಎಂದು ಮುಖ್ಯ ಶಿಕ್ಷಕಿ ಬಿ.ಜಿ. ಶಿರ್ಸಿ ಹೇಳಿದರು.

ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಅಕ್ಕಮಹಾದೇವಿ ಜಯಂತ್ಯುತ್ಸವದಲ್ಲಿ ಮಾತನಾಡಿದ ಅವರು, ಅಕ್ಕಮಹಾದೇವಿ ಸ್ತ್ರೀವಾದದ ಪ್ರತಿಪಾದಕಿಯಾಗಿ ಮತ್ತು ಸ್ವಾಭಿಮಾನದ ಸಂಕೇತವಾಗಿ ಕನ್ನಡ ಸಾಹಿತ್ಯದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂದು ಹೇಳಿರು.

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಉಡುತಡಿಯಲ್ಲಿ ತಂದೆ ನಿರ್ಮಲಶೆಟ್ಟಿ ಮತ್ತು ತಾಯಿ ಸುಮತಿಯವರ ಮಗಳಾಗಿ ಜನಿಸಿದರು. ಬಾಲ್ಯದಿಂದಲೇ ಶಿವನ ಮೇಲೆ ತೀವ್ರ ಭಕ್ತಿ ಹೊಂದಿದ್ದ ಅಕ್ಕ, ಚೆನ್ನಮಲ್ಲಿಕಾರ್ಜುನನನ್ನು ತನ್ನ ಪತಿ ಎಂದು ನಂಬಿದ್ದಳು. ಕೌಶಿಕ ರಾಜನೊಂದಿಗಿನ ವಿವಾಹದ ನಂತರ, ಲೌಕಿಕ ಜೀವನವನ್ನು ಧಿಕ್ಕರಿಸಿ, ಶಿವನ ಅನ್ವೇಷಣೆಯಲ್ಲಿ ಅರಮನೆಯನ್ನು ತೊರೆದಳು. ತನ್ನ ಭಕ್ತಿಯ ಪರೀಕ್ಷೆಯಾಗಿ ಸಕಲ ಭೋಗಜೀವನವನ್ನು ತ್ಯಜಿಸಿದಳು. ಬಸವಣ್ಣ, ಅಲ್ಲಮಪ್ರಭು, ಸಿದ್ಧರಾಮ ಮೊದಲಾದ ಶರಣರಿದ್ದ ಅನುಭವ ಮಂಟಪದಲ್ಲಿ ಚರ್ಚೆಗಳಲ್ಲಿ ಪಾಲ್ಗೊಂಡು ಉನ್ನತ ಜ್ಞಾನವನ್ನು ಪಡೆದರು. ಅಲ್ಲಮಪ್ರಭುಗಳು ಇವರನ್ನು ಅಕ್ಕ ಎಂದು ಕರೆದರು. ಚೆನ್ನಮಲ್ಲಿಕಾರ್ಜುನ ಅಂಕಿತನಾಮದಲ್ಲಿ ಅಕ್ಕಮಹಾದೇವಿ 430ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ. ಅವರ ವಚನಗಳು ಜ್ಞಾನ, ವೈರಾಗ್ಯ ಮತ್ತು ತೀವ್ರ ಭಕ್ತಿಯಿಂದ ಕೂಡಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಎನ್.ವಿ. ಕಡೆತೋಟದ, ವಿ.ಪಿ. ಗ್ರಾಮಪುರೋಹಿತ, ಎಸ್.ವಿ. ಹಿರೇಮಠ, ವಿ. ಎಸ್. ಜಾದವ್, ಎಸ್. ಕೆ. ಕುಲಕರ್ಣಿ, ಸಾವಿತ್ರಿ ಮಾನ್ವಿ, ಎಂ. ಎಂ. ಸಿಳ್ಳಿನ್, ಗೀತಾ ಶಿಂಧೆ, ಕೆ. ಐ. ಕೋಳಿವಾಡ, ಐ.ಬಿ. ಒಂಟೇಲಿ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ ಅಯ್ಯನಗೌಡ್ರ, ರಾಜೇಶ್ವರಿ ಈಟಿ, ಗೀತಾ ಕಂಬಳಿ, ರಜಿಯಾಬೇಗಂ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ಎಂ. ಎಸ್. ಧರ್ಮಾಯತ, ಎಸ್.ಎ. ಚೋಳಿನ, ಪಿ. ಎಸ್. ಅಂಗಡಿ, ಪದ್ಮಾವತಿ ಅಂಬಿಗೇರ, ಶ್ವೇತಾ ಹಿರೇಮಠ, ನೇತ್ರಾ ಸೋಬಾನದ, ನಂದಿತಾ ರಾಜೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೇರಳ ಚುನಾವಣೆಗೆ ಉಸ್ತುವಾರಿಯಾಗಿ ಮುತ್ತುರಾಜ ಭಾವಿಮನಿ ನೇಮಕ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಕೇರಳ ರಾಜ್ಯದ ಸಾರ್ವತ್ರಿಕ ಚುನಾವಣೆಗೆ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಶಿರಹಟ್ಟಿ ಪಟ್ಟಣದ ಮುತ್ತುರಾಜ ಭಾವಿಮನಿ ಅವರನ್ನು ಕೇರಳ ಚುನಾವಣೆಗೆ ಉಸ್ತುವಾರಿಯಾಗಿ ರಾಜ್ಯಾಧ್ಯಕ್ಷ ಆರ್. ಧರ್ಮಸೇನ್ ನೇಮಕ ಮಾಡಿದ್ದಾರೆ.

# ಸಾರ್ವಜನಿಕರ ಅಹವಾಲುಗಳಿಗೆ ತಾಳ್ಮೆಯಿಂದ ಸ್ಪಂದಿಸಲು ಪೊಲೀಸರಿಗೆ ಕರೆ

## ಹುಬ್ಬಳ್ಳಿ-ಧಾರವಾಡದಲ್ಲಿ ಪೊಲೀಸ್ ಧ್ವಜ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತಾಲಯದ ವತಿಯಿಂದ ಕಾರವಾರ ರಸ್ತೆಯ ಹಳೆಯ ಸಶಸ್ತ್ರ ಮೀಸಲು ಪಡೆಯ ಕವಾಯತು ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಿವೃತ್ತ ಪೊಲೀಸ್ ಸಬ್ ಇನ್ಸಪೆಕ್ಟರ್ ಎಂ.ಐ. ಪಠಾಣ ಅವರು, ಪೊಲೀಸರು ಸಮಾಜದೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿ, ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಕಚೇರಿಗೆ ತೆಗೆದುಕೊಂಡು ಬಂದಾಗ ಅವುಗಳನ್ನು ತಾಳ್ಮೆಯಿಂದ ಆಲಿಸಿ ಪರಿಹಾರ ನೀಡಬೇಕು ಎಂದು ಹೇಳಿದರು.

> "ಸಾರ್ವಜನಿಕರ ಅಹವಾಲುಗಳನ್ನು ತಾಳ್ಮೆಯಿಂದ ಆಲಿಸಿ ಸ್ಪಂದಿಸುವುದು ಪೊಲೀಸರ ಪ್ರಮುಖ ಕರ್ತವ್ಯ."
> – ಎಂ.ಐ. ಪಠಾಣ.

1965ರ ಎಪ್ರಿಲ್ 2ರಂದು ಕರ್ನಾಟಕ ಪೊಲೀಸ್ ಪಡೆ ರಚನೆಯಾದ ದಿನದ ಸ್ಮರಣಾರ್ಥವಾಗಿ ಪ್ರತಿ ವರ್ಷ ಪೊಲೀಸ್ ಧ್ವಜ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಧ್ವಜ ಮಾರಾಟದಿಂದ ಸಂಗ್ರಹವಾಗುವ ನಿಧಿಯನ್ನು ನಿವೃತ್ತ ಪೊಲೀಸ್ ಸಿಬ್ಬಂದಿ ಹಾಗೂ ಅವರ ಕುಟುಂಬದವರ ಕಲ್ಯಾಣಕ್ಕಾಗಿ ಬಳಸಲಾಗುತ್ತದೆ ಎಂದು ತಿಳಿಸಲಾಯಿತು. ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತರಾದ ಎನ್. ಶಶಿಕುಮಾರ ಅವರು ಮಾತನಾಡಿ, ಪೊಲೀಸ್ ಇಲಾಖೆ ಯಾವಾಗಲೂ ಸಾರ್ವಜನಿಕರ ಹಿತಾಸಕ್ತಿಗಾಗಿ ಕಾರ್ಯನಿರ್ವಹಿಸುತ್ತಿದ್ದು, ಪ್ರಾಮಾಣಿಕತೆ ಮತ್ತು ಪಾರದರ್ಶಕತೆಯಿಂದ ಕರ್ತವ್ಯ ನಿರ್ವಹಿಸುವುದು ಅತ್ಯವಶ್ಯಕ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಧ್ವಜಗಳನ್ನು ಬಿಡುಗಡೆ ಮಾಡಿ ವಿತರಿಸಲಾಯಿತು. ವಿವಿಧ ಗಣ್ಯರು ಕಲ್ಯಾಣ ನಿಧಿಗೆ ದೇಣಿಗೆ ನೀಡಿದರು. ಪರೇಡ್ ಕಮಾಂಡರ್ ಆರ್‌ಎಸ್‌ಐ ಸಂತೋಷ ಭೋಜಪ್ಪಗೋಳ ಅವರ ನೇತೃತ್ವದಲ್ಲಿ ಪೊಲೀಸ್ ತಂಡಗಳು ಆಕರ್ಷಕ ಪಥಸಂಚಲನ ನಡೆಸಿದವು. ಕಾರ್ಯಕ್ರಮದಲ್ಲಿ ಪೊಲೀಸ್ ಅಧಿಕಾರಿಗಳು, ನಿವೃತ್ತ ಸಿಬ್ಬಂದಿ ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಜನಮನ ಗೆದ್ದ ಆಧುನಿಕ ಭಗೀರಥ ಭೀಮನಾಯ್ಕ!

## 51ನೇ ಹುಟ್ಟುಹಬ್ಬ ಅಂಗವಾಗಿ ರೋಗಿಗಳಿಗೆ ಹಾಲು, ಹಣ್ಣು ವಿತರಣೆ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮಾಜಿ ಶಾಸಕ ಭೀಮನಾಯ್ಕ ಅವರು ಶಾಸಕರಾಗಿದ್ದ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಭೀಮನಾಯ್ಕ ಅವರ 51ನೇ ಹುಟ್ಟುಹಬ್ಬದ ಅಂಗವಾಗಿ ರೋಗಿಗಳಿಗೆ ಹಾಲು, ಹಣ್ಣು ಹಾಗೂ ಬ್ರೆಡ್ ವಿತರಿಸಿ ಅವರು ಮಾತನಾಡಿದರು.

ಭೀಮನಾಯ್ಕ ಅವರು ಮಾಲವಿ ಜಲಾಶಯ ಹಾಗೂ ಚಿಲವಾರಬಂಡಿ ಏತ ನೀರಾವರಿ ಯೋಜನೆಗಳಿಗೆ ನೀರು ತರಿಸುವ ಮೂಲಕ "ಆಧುನಿಕ ಭಗೀರಥ" ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಕ್ಷೇತ್ರದಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಜನಮನ ಗೆದ್ದಿದ್ದಾರೆ ಎಂದು ಹೇಳಿದರು. ಅವರ ಸೇವಾ ಕಾರ್ಯಗಳು ಸದಾ ಅಜರಾಮರವಾಗಿವೆ ಎಂದರು.




ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿಗೋಣಿಬಸಪ್ಪ ಮಾತನಾಡಿ, ಭೀಮನಾಯ್ಕ ಅವರು ಮಾಡಿದ ಅಭಿವೃದ್ಧಿ ಕಾರ್ಯಗಳು ಇಂದಿಗೂ ಜನರ ಮನಸ್ಸಿನಲ್ಲಿ ಉಳಿದಿವೆ. ಪ್ರಸ್ತುತ ಶಾಸಕರು ಜನರ ನಿರೀಕ್ಷೆಗಳನ್ನು ಈಡೇರಿಸಲು ವಿಫಲರಾಗಿದ್ದು, ಕ್ಷೇತ್ರದಲ್ಲಿ ಅಭಿವೃದ್ಧಿ ಕಾಣಿಸುತ್ತಿಲ್ಲ ಎಂದು ಆರೋಪಿಸಿದರು.

ಮುಂದಿನ ಚುನಾವಣೆಯಲ್ಲಿ ಮತದಾರರು ಅವಕಾಶ ನೀಡಿದರೆ ಭೀಮನಾಯ್ಕ ಅವರು ಮತ್ತೊಮ್ಮೆ ಅಧಿಕಾರಕ್ಕೆ ಬಂದು ಇನ್ನಷ್ಟು ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ವಿಶ್ವಾಸ ವ್ಯಕ್ತಪಡಿಸಿದರು.

ಕಾಂಗ್ರೆಸ್ ಮುಖಂಡರಾದ ಲ್ಯಾಂಡ್ ಆರ್ಮಿ ದೇವೇಂದ್ರಪ್ಪ ಹಾಗೂ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಗುರು ಸೊನ್ನದ ಅವರು ಭೀಮನಾಯ್ಕ ಅವರ ವ್ಯಕ್ತಿತ್ವ ಮತ್ತು ಸೇವಾ ಮನೋಭಾವವನ್ನು ಕೊಂಡಾಡಿ ಹುಟ್ಟುಹಬ್ಬದ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಹೆಗ್ಡಾಳ್ ರಾಮಣ್ಣ, ಮರಿಯಮ್ಮನಹಳ್ಳಿ ಪಟ್ಟಣ ಪಂಚಾಯತ್ ಅಧ್ಯಕ್ಷ ಆದಿಮನಿ ಹುಸೇನ್ ಸಾಬ್, ಪುರಸಭೆ ನಾಮನಿರ್ದೇಶಿತ ಸದಸ್ಯ ಚಿಂತರಪಳ್ಳಿ ಬಾರಿಕರ ಮಂಜುನಾಥ, ಜಿಲ್ಲಾ ಗ್ಯಾರಂಟಿ ಸಮಿತಿ ಉಪಾಧ್ಯಕ್ಷ ಜಂದೀಸಾಬ್, ಬಾಲಕೃಷ್ಣ ಬಾಬು, ಗುಂಡ್ರು ಹನುಮಂತಪ್ಪ, ಆರ್‌ಎಸ್‌ಎಸ್ ಬ್ಯಾಂಕ್ ಅಧ್ಯಕ್ಷ ದಾದಮ್ಮನವರ ಬಸವರಾಜ, ಉಪಾಧ್ಯಕ್ಷ ಗಂಗಾಧರಯ್ಯ, ತ್ಯಾವಣಿಗಿ ಕೊಟ್ರೇಶ್, ಕುರುಬರ ವೆಂಕಟೇಶ, ನೂರ್ ಉಲ್ಲಾ ಸಾಬ್, ಮಡಿವಾಳರ ಪ್ರಕಾಶ್, ಮಂಜುನಾಥ್ ವಿಶ್ವಕರ್ಮ, ಬಲ ಹುಣಸಿ ನಾಗರಾಜ್, ಮೇಘರಾಜ್ ಬಾಚಿಗೊಂಡನಹಳ್ಳಿ, ನಾಗರಾಜ್ ಕಲ್ಲಹಳ್ಳಿ, ಆನಂದಳ್ಳಿ ಪ್ರಭಾಕರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮರಿಯಮ್ಮನಹಳ್ಳಿ ಪಟ್ಟಣ ಪಂಚಾಯತಿ ಉಪಾಧ್ಯಕ್ಷ ವಸಂತ್ ಹಾಗೂ ಸದಸ್ಯರಾದ ಬೆಣಕಲ್ ಭಾಷಾ, ನಿಶರ್ ಭಾಷಾ, ರವಿ ಕಾಟೇರ್, ರಾಘಣ್ಣ, ಮರಳಿ ಮಂಜಣ್ಣ, ಕಾರ್ತಿಕ್ ಹಂಪಾಪಟ್ಟಣ ಹಾಗೂ ಭೀಮನಾಯ್ಕ ಅಭಿಮಾನಿಗಳು ಮತ್ತು ಕಾಂಗ್ರೆಸ್ ಕಾರ್ಯಕರ್ತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಸಚಿವ ಪಾಟೀಲರಿಗೆ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಿಂದ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರಕ್ಕೆ ಆಗಮಿಸಿದ ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವರಾದ ಎಂ.ಬಿ. ಪಾಟೀಲ ಅವರನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ ಇವರ ನಿಯೋಗದಲ್ಲಿ ಭೇಟಿ ಮಾಡಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷರಾದ ಜಯದೇವ ಎಂ. ಮೆಣಸಗಿ, ಸಹ ಗೌರವ ಕಾರ್ಯದರ್ಶಿಗಳಾದ ಅಶೋಕ ಎಸ್. ಸಂಕಣ್ಣವರ ಹಾಗೂ ಗಣ್ಯ ವ್ಯಾಪಾರಸ್ಥರಾದ ವಿಜಯಕುಮಾರ ಗಡ್ಡಿ, ಶಿವಕುಮಾರ ಎಚ್. ಪಾಟೀಲ, ವೀರಣ್ಣ ಗೊಡಚಿ, ಸುನೀಲ ಅಗರವಾಲ್, ಗಂಗಾಧರ ಹಿರೇಮಠ, ರಾಜು ಸಂಕೇಶ್ವರ ಇನ್ನೂ ಅನೇಕ ಜನ ವ್ಯಾಪಾರಸ್ಥರು ಮತ್ತು ಉದ್ಯಮದಾರರು ಪಾಲ್ಗೊಂಡಿದ್ದರು.

### ಪೊಲೀಸ್ ಧ್ವಜ ದಿನಾಚರಣೆಯಲ್ಲಿ ನಿವೃತ್ತ ಪಿಎಸ್‌ಐ ಡಿ. ಚಾಮುಂಡೇಶ್ವರಿ ಅಭಿಮತ

## ಕರ್ತವ್ಯನಿಷ್ಠೆ, ಸಮಯಪ್ರಜ್ಞೆಯಿಂದಲೇ ಪೊಲೀಸರ ಗೌರವ ಹೆಚ್ಚುತ್ತದೆ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ನಗರದ ಜಿಲ್ಲಾ ಸಶಸ್ತ್ರ ಮೀಸಲು ಪೊಲೀಸ್ ಪಡೆಯ ಕವಾಯತು ಮೈದಾನದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಪೊಲೀಸ್ ಧ್ವಜ ದಿನಾಚರಣೆ ಹಾಗೂ ನಿವೃತ್ತರ ಸೇವಾ ಸ್ಮರಣೆ ಮತ್ತು ಗೌರವ ಸಮರ್ಪಣೆ ಸಮಾರಂಭವನ್ನು ಶಿಸ್ತಿನಿಂದ ನಡೆಸಲಾಯಿತು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ನಿವೃತ್ತ ಪೊಲೀಸ್ ಉಪನಿರೀಕ್ಷಕಿ ಡಿ. ಚಾಮುಂಡೇಶ್ವರಿ ಮಾತನಾಡಿ, ಪೊಲೀಸ್ ಇಲಾಖೆ ತ್ಯಾಗ, ಶಿಸ್ತು ಮತ್ತು ಸಮಯಪ್ರಜ್ಞೆಗೆ ಪ್ರತೀಕವಾಗಿದೆ.

ಪೊಲೀಸ್ ಸಿಬ್ಬಂದಿಗಳಲ್ಲಿನ ಶಿಸ್ತು, ಸಾಮಾಜಿಕ ಕಳಕಳಿ ಮತ್ತು ಸಮಯ ಪ್ರಜ್ಞೆ ನಮ್ಮ ಗೌರವವನ್ನು ಹೆಚ್ಚಿಸುತ್ತದೆ ಎಂದರು.

ಪೊಲೀಸ್ ಇಲಾಖೆ ಒಂದು ಕುಟುಂಬದಂತೆ ಕಾರ್ಯನಿರ್ವಹಿಸುತ್ತಿದ್ದು, ಕೆಳಹಂತದ ಸಿಬ್ಬಂದಿಗಳಿಂದಾಗುವ ಸಣ್ಣ ತಪ್ಪುಗಳನ್ನು ಹಿರಿಯ ಅಧಿಕಾರಿಗಳು ಮನ್ನಿಸಿ, ಅವರಿಗೆ ಮಾರ್ಗದರ್ಶನ ನೀಡಬೇಕು.

ಇಲಾಖೆಯಿಂದ ಸಿಗುವ ಪ್ರೋತ್ಸಾಹ, ಗೌರವ, ಪ್ರೀತಿ ಮತ್ತು ವಿಶ್ವಾಸಗಳು ಸಿಬ್ಬಂದಿಗಳ ಆತ್ಮವಿಶ್ವಾಸವನ್ನು ಹೆಚ್ಚಿಸಿ ಅವರ ವೃತ್ತಿಪರತೆಯನ್ನು ವೃದ್ಧಿಸುತ್ತವೆ ಎಂದು ಹೇಳಿದರು.

ಶಿಸ್ತಿನಿಂದ ನಡೆದುಕೊಂಡರೆ ಅಧಿಕಾರಿಗಳು ಹಾಗೂ ಸಾರ್ವಜನಿಕರು ಗೌರವಿಸುತ್ತಾರೆ. ಪ್ರಾಮಾಣಿಕತೆ ನಮ್ಮನ್ನು ಕಾಪಾಡುತ್ತದೆ. ಸಂಬಳಕ್ಕೆ ತಕ್ಕಂತೆ ದುಡಿಯುವುದರಿಂದ ಸೇವೆ ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ಪೊಲೀಸ್ ಧ್ವಜ ದಿನಾಚರಣೆ ಅಂಗವಾಗಿ ಪರೇಡ್ ಕಮಾಂಡರ್ ಡಿಎಆರ್ ಆರ್‌ಪಿಐಗಳಾದ ಎಫ್. ಆರ್. ಡೊಕ್ಕಣ್ಣನವರ ಮತ್ತು ಆರ್. ಎಸ್. ಗುಡನಟ್ಟಿ ಮುಂದಾಳತ್ವದಲ್ಲಿ ಆರ್‌ಎಸ್‌ಐ ವಾಸು ರಕ್ಷೇದ ನೇತೃತ್ವದ ಪ್ರಥಮ ತಂಡ, ಪಿಎಸ್‌ಐ ಸುನೀಲಕುಮಾರ ಎಂ.ಎಲ್ ನೇತೃತ್ವದ ದ್ವಿತೀಯ ತಂಡ ಹಾಗೂ ಮಹಿಳಾ ಪಿಎಸ್‌ಐ ನಿರ್ಮಲಾ ಜಂಬಗಿ ಮತ್ತು ಆರ್‌ಎಸ್‌ಐ ಮಂಜುನಾಥ ಕುರುಗೋಡಿ ನೇತೃತ್ವದ ತಂಡಗಳು ಪಥಸಂಚಲನದ ಮೂಲಕ ಗೌರವ ವಂದನೆ ಸಲ್ಲಿಸಿದವು.

ಕಾರ್ಯಕ್ರಮದಲ್ಲಿ ಕೆಎಸ್‌ಐಎಸ್‌ಎಫ್ ಕಮಾಂಡೆಂಟ್ ಗುರುನಾಥ, ಡಿಎಸ್‌ಪಿ ಶಿವಾನಂದ ಕಟಗಿ, ಡಿಎಸ್‌ಪಿ ವಿನೋದ ಮುಕ್ತೆದಾರ ಸೇರಿದಂತೆ ಜಿಲ್ಲಾ ಮಟ್ಟದ ಪೊಲೀಸ್ ಅಧಿಕಾರಿಗಳು, ನಿವೃತ್ತ ಅಧಿಕಾರಿಗಳು, ಪೊಲೀಸ್ ಕುಟುಂಬದ ಸದಸ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

> "ನಮ್ಮ ಪೊಲೀಸ್ ಇಲಾಖೆಯಲ್ಲಿ ನಾವೆಲ್ಲರೂ ಒಂದು ಕುಟುಂಬದಂತೆ ಬದುಕುತ್ತಿದ್ದೇವೆ. ಒಬ್ಬರಿಗೆ ನೋವಾದರೆ ಇನ್ನೊಬ್ಬರು ಸ್ಪಂದಿಸುವ ಮನೋಭಾವ ನಮ್ಮದು. ಅಡೆತಡೆಗಳಿಗೂ ಹೆದರದೆ ಕರ್ತವ್ಯ ನಿರ್ವಹಿಸಬೇಕು."
> – **ಡಿ. ಚಾಮುಂಡೇಶ್ವರಿ**, ನಿವೃತ್ತ ಪಿಎಸ್‌ಐ.

ಪೊಲೀಸ್ ಇಲಾಖೆಯಲ್ಲಿ ದೀರ್ಘಾವಧಿ ಸೇವೆ ಸಲ್ಲಿಸಿ ನಿವೃತ್ತರಾದ ಪಿಎಸ್‌ಐ ಎಂ.ಹೆಚ್. ಮುಂದಿನಮನಿ, ಪಿಎಸ್‌ಐ ಆರ್.ಬಿ. ಹಳ್ಳಿ, ಮಹಿಳಾ ಪಿಎಸ್‌ಐ ಕೆ.ವಿ. ವಾಲಿಕಾರ, ಎಎಸ್‌ಐಗಳಾದ ಎಸ್.ಐ. ಗದಗ, ಎಸ್.ಸಿ. ಗಂಡಲಾಟಿ, ಹೆಚ್.ಟಿ. ಬಂಡಿವಡ್ಡರ, ಐ.ಡಿ. ಭಾವಿಮನಿ, ಎಂ.ಆರ್. ಗೋಲಾದಾಜ್, ವೈ.ಎಸ್. ಮೇಟಿ, ಹೆಚ್.ಜೆ. ಜಾಧವ ಹಾಗೂ ಸಿಹೆಚ್‌ಸಿ ಸಿಬ್ಬಂದಿಗಳಾದ ಡಿ.ವೈ. ಮುಮ್ಮಿಗಟ್ಟಿ, ಎನ್.ವಾಯ್. ಭರಮನ್ನವರ, ಯು.ಆರ್. ಮೆಟ್ಟಿನ, ಎ.ಎನ್. ಚಿಕಣಿ, ಎಂ.ಎಸ್. ಕೊಟಕಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

## ಜುಮ್ಮಾ ಮಸ್ಜಿದ್ ಕಮಿಟಿಯಿಂದ ಸಿದ್ಧರಾಮ ಶ್ರೀಗಳಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಜಗದ್ಗುರು ತೋಂಟದಾರ್ಯ ಮಠದ ಜಾತ್ರೆ ಪ್ರತಿ ವರ್ಷದಂತೆ ಈ ವರ್ಷವೂ ಗುರುವಾರ ಸಂಪ್ರದಾಯಬದ್ಧವಾಗಿ ನಡೆಯಿತು. ಎಸ್.ಎಸ್. ಕಳಸಾಪುರ ಶೆಟ್ಟರ ಮನೆಯಿಂದ ಆರಂಭವಾದ ಜಾತ್ರಾ ಮೆರವಣಿಗೆ ನಗರದ ಜುಮ್ಮಾ ಮಸ್ಜಿದ್ ತಲುಪಿತು.

ಈ ವೇಳೆ ಜುಮ್ಮಾ ಮಸ್ಜಿದ್ ಕಮಿಟಿಯ ವತಿಯಿಂದ ಮೆರವಣಿಗೆಗೆ ಬಂದ ಭಕ್ತರಿಗೆ ಬಾಳೆಹಣ್ಣು ಹಾಗೂ ತಂಪು ಪಾನೀಯಗಳ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಯಿತು.

ನಂತರ ಜುಮ್ಮಾ ಮಸ್ಜಿದ್ ಉಪಾಧ್ಯಕ್ಷರು ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರ್‌ಸಾಬ ಬಬರ್ಚಿ ಅವರು ತೋಂಟದಾರ್ಯ ಮಠದ ಸಿದ್ಧರಾಮ ಮಹಾಸ್ವಾಮಿಜಿಯವರಿಗೆ ಫಲಪುಷ್ಪ ಮತ್ತು ನೆನಪಿನ ಕಾಣಿಕೆ ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಜುಮ್ಮಾ ಮಸ್ಜಿದ್ ಕಾರ್ಯದರ್ಶಿ ಹಾಜಿ ಮಕಬೂಲ್‌ಸಾಬ ಶಿರಹಟ್ಟಿ, ರಜಾಕ್ ಡಂಕೆದ, ಹಾಜಿ ಸತ್ತಾರಸಾಬ ಶಿರಹಟ್ಟಿ, ಶಫಿ ಕುದರಿ, ಉಮರ್ ಫಾರುಕ್ ಹುಬ್ಬಳ್ಳಿ, ಮುಫ್ತಿ ಶಬ್ಬೀರ್‌ಸಾಬ, ಜಿ.ಡಿ. ಕಳಸಾಪುರ, ಹಾಜಿ ಮಹಮ್ಮದ್ ಅಲಿ ಕಲೆಗಾರ, ಹಾಜಿ ಇಸ್ಮಾಯಿಲ್‌ಸಾಬ ಹರ್ಲಾಪುರ, ಇಸ್ಮಾಯಿಲ್‌ಸಾಬ ಕುಂದರ್ಪಿ, ನಿಜಾಮುದ್ದೀನ್ ಕಾಟಾಪುರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ನೀರಿನ ಬಾಟಲ್, ಊಟದ ತಟ್ಟೆ ವಿತರಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗದಗ ಜಿಲ್ಲೆಯ ವಿವಿಧ ಸರ್ಕಾರಿ ಶಾಲೆಗಳ 2,482 ವಿದ್ಯಾರ್ಥಿಗಳಿಗೆ ಬೆಂಗಳೂರಿನ ನೋವೆಲ್ ಹೋಪ್ ಫೌಂಡೇಶನ್ ವತಿಯಿಂದ ನೀರಿನ ಸ್ಟೀಲ್ ಬಾಟಲ್ ಹಾಗೂ ಊಟದ ತಟ್ಟೆಗಳನ್ನು ವಿತರಿಸಲಾಯಿತು.

ಶಿಗ್ಲಿಯ ಎಂಪಿಕೆಜಿಎಸ್ ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಡಿಡಿಪಿಐ ಆರ್.ಎಸ್. ಬುರಡಿ ಅವರು, "ಶಿಕ್ಷಣ ಸೇವೆ ದೇವರ ಸೇವೆಯಷ್ಟೇ ಅಲ್ಲ, ಅದು ಸಮಾಜ ಸೇವೆಯಾಗಿದೆ" ಎಂದು ಹೇಳಿದರು. ಸರ್ಕಾರಿ ಶಾಲೆಗಳ ಅಭಿವೃದ್ಧಿ, ಶ್ರೇಯೋಭಿವೃದ್ಧಿ ಹಾಗೂ ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಆರೋಗ್ಯ ಸೌಲಭ್ಯಗಳನ್ನು ಒದಗಿಸಲು ದಾನಿಗಳು ಮತ್ತು ಶಿಕ್ಷಣ ಪ್ರೇಮಿಗಳ ಸಹಕಾರ ಅತ್ಯಂತ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮಕ್ಕೆ ಹೂವಿನ ಶಿಗ್ಲಿಯ ಶ್ರೀ ಚನ್ನವೀರ ಮಹಾಸ್ವಾಮಿಗಳು ಸಾನಿಧ್ಯವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಬಿಇಓ ಹೆಚ್. ನಾಣಕಿ ನಾಯಕ, ನೋವೆಲ್ ಹೋಪ್ ಫೌಂಡೇಶನ್ ಮ್ಯಾನೇಜರ್ ದೀಪಕ್, ರಾಮಣ್ಣ ಬೂದಿಹಾಳ, ಬಿ.ಎಸ್. ಹರ್ಲಾಪುರ, ಶರಣಬಸವಗೌಡ ಪಾಟೀಲ, ಎನ್.ವಿ. ಕುಲಕರ್ಣಿ, ಮಂಜುನಾಥ್ ಬಡಿ, ಎಸ್.ಬಿ. ಅಣ್ಣಿಗೇರಿ, ತಿಪ್ಪನಾಯಕ್ ಎಲ್., ಆದೇಶ ಹುಲಗೂರ, ವಿರುಪಾಕ್ಷಪ್ಪ ಶಿರಹಟ್ಟಿ, ಆರ್.ಡಿ. ಕಲಾಗಯರ, ದೀಪಾ ಬಸ್ಮಿ, ಜ್ಯೋತಿ ಗಾಯಕವಾಡ, ಮಾಲಂಬಿ ಗುತ್ತಲ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



### ಬಿ.ಜಿ.ಅಣ್ಣಿಗೇರಿ ಆಶ್ರಮದಲ್ಲಿ ಉಚಿತ ಟ್ಯೂಶನ್ ಆರಂಭ

## ವಿದ್ಯಾರ್ಥಿಗಳು ಶ್ರದ್ಧೆಯಿಂದ ಕಲಿಯಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳು ಕಲಿಕೆಯಲ್ಲಿ ಶ್ರದ್ಧೆ, ಶಿಸ್ತು, ಸಂಯಮ, ಬದ್ಧತೆಯನ್ನು ರೂಢಿಸಿಕೊಂಡು ಏಕಾಗ್ರತೆಯಿಂದ ಅಭ್ಯಾಸ ಮಾಡಿದಲ್ಲಿ ಖಂಡಿತ ಯಶಸ್ಸು ಕಾಣುವ ಮೂಲಕ ಜೀವನದಲ್ಲಿ ಉನ್ನತ ಹಂತವನ್ನು ತಲುಪಲು ಸಾಧ್ಯ ಎಂದು ಯುವ ಧುರೀಣ ಆಂಜನೇಯ ಕಟಗಿ ಹೇಳಿದರು.

ನಗರದ ಬಿ.ಜಿ.ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಬೇಸಿಗೆ ರಜೆಯ ಉಚಿತ ಟ್ಯೂಶನ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಹಿಂದೆ ಗುರು ಮುಂದೆ ಗುರಿಯನ್ನು ಇಟ್ಟುಕೊಂಡು ಪರಿಶ್ರಮದೊಂದಿಗೆ ಮುನ್ನಡೆದಲ್ಲಿ ಆದರ್ಶ ವ್ಯಕ್ತಿಯಾಗಿ, ಸಾಧಕರಾಗಿ ಹೊರಹೊಮ್ಮಬಲ್ಲರು. ಬಿ.ಜಿ.ಅಣ್ಣಿಗೇರಿ ಅವರು ತಮ್ಮ ಜೀವನವನ್ನೇ ಶಿಕ್ಷಣಕ್ಕಾಗಿ ಮುಡಿಪಾಗಿಟ್ಟು ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗೆ ಅದರಲ್ಲೂ ವಿಶೇಷವಾಗಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಶನ್ ಹೇಳಿ ಅವರಿಗೆ ಊಟ, ವಸತಿಗೆ ವ್ಯವಸ್ಥೆ ಮಾಡಿ ಕೊಟ್ಟ ಪುಣ್ಯಾತ್ಮರಾಗಿದ್ದರು ಎಂದರು.

ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ಅವರು ಪ್ರತಿಷ್ಠಾನದ ಧ್ಯೇಯೋದ್ದೇಶಗಳನ್ನು ವಿವರಿಸಿ ಬೇಸಿಗೆ ರಜೆಗೆ ಉಚಿತ ತರಗತಿಗಳನ್ನು ಇಂದಿನಿಂದ ಪ್ರಾರಂಭಿಸಲಾಗಿದೆ. ಬಿ.ಜಿ.ಅಣ್ಣಿಗೇರಿ ಗುರುಗಳ ಶಿಷ್ಯರು ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದು ಅವರಲ್ಲಿ ಕೆಲವರು ಇಲ್ಲಿ ಆಶ್ರಮಕ್ಕೆ ಬಂದು ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ಟ್ಯೂಶನ್ ಹೇಳುವ ಮೂಲಕ ಗುರುವಂದನೆ ಸಲ್ಲಿಸಲು ಮುಂದಾಗಿರುವುದು ಅಭಿನಂದನೀಯ ಎಂದರು.

ಇಲ್ಲಿನ ಟ್ಯೂಶನ್ ಪಡೆದು ಪ್ರತಿಭಾನ್ವಿತ ವಿದ್ಯಾರ್ಥಿಗಳಾಗಿ ಹೊರಹೊಮ್ಮುವ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ ಪ್ರತಿಭಾ ಪ್ರತಿಷ್ಠಾನವೂ ಸಹ ನಿಮ್ಮ ಯಶಸ್ವಿಗೆ ಸಾಥ್ ನೀಡಲಿದೆ ಎಂದು ಶುಭ ಕೋರಿದರು. ರವಿ ದಂಡಿನ ಮಾತನಾಡಿ, ಅನುಭವಿ ಶಿಕ್ಷಕ-ಶಿಕ್ಷಕಿಯರು 4 ಬ್ಯಾಚ್ ಪ್ರಕಾರ ಟ್ಯೂಶನ್ ಹೇಳಲಿದ್ದು, ನೋಂದಣಿ ಮಾಡಿಕೊಂಡವರು ಸೇರಿದಂತೆ ದಿನಕ್ಕೆ ಸುಮಾರು 500 ವಿದ್ಯಾರ್ಥಿ-ವಿದ್ಯಾರ್ಥಿನಿಯರು ಟ್ಯೂಶನ್‌ಗೆ ಆಗಮಿಸುವರು ಎಂದರು. ವೇದಿಕೆಯ ಮೇಲೆ ಬಸವರಾಜ ಬಿಂಗಿ, ಸಿದ್ದಣ್ಣ ಕವಲೂರ, ತೋಂಟೇಶ್ ವೀರಲಿಂಗಯ್ಯನಮಠ, ಬಸವರಾಜ ಬೆಳ್ಳೇರಿಮಠ, ಶಿವಣ್ಣ ಕಟ್ಟಿ, ಗುರುರಾಜ ಅಣ್ಣಿಗೇರಿ ಉಪಸ್ಥಿತರಿದ್ದರು.

## ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಪದವಿ ಮಾತ್ರ ಸಾಲದು



■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಕೇವಲ ಪದವಿ ಮಾತ್ರ ಸಾಲದು, ಇದರ ಜೊತೆಗೆ ಕೌಶಲ್ಯಾಭಿವೃದ್ಧಿಯೂ ಅಗತ್ಯವಾಗಿದ್ದು, ಸರ್ಟಿಫಿಕೇಟ್ ಕೋರ್ಸ್‌ಗಳು ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಜ್ಞಾನ ನೀಡುವುದಲ್ಲದೆ ಆತ್ಮವಿಶ್ವಾಸವನ್ನೂ ಹೆಚ್ಚಿಸುತ್ತವೆ ಎಂದು ಇತಿಹಾಸ ಪ್ರಾಧ್ಯಾಪಕ ಮತ್ತು ಎನ್.ಎಸ್.ಎಸ್. ಘಟಕದ ಸಂಯೋಜಕ ಡಾ. ಅಪ್ಪಣ್ಣ ಹಂಜೆ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಾಣಿಜ್ಯಶಾಸ್ತ್ರ ವಿಭಾಗವು ಆಂತರಿಕ ಗುಣಮಟ್ಟ ಭರವಸೆ ಕೋಶ ಹಾಗೂ ಉದ್ಯೋಗ ಮಾಹಿತಿ ಕೋಶಗಳ ಸಹಭಾಗಿತ್ವದಲ್ಲಿ ಬಿಕಾಂ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಮತ್ತು ಕೌಶಲ್ಯಗಳ ಅಭಿವೃದ್ಧಿಗಾಗಿ 30 ದಿನಗಳ 'ತೇಜಸ್' ಸರ್ಟಿಫಿಕೇಟ್ ಕೋರ್ಸ್ ಉದ್ಘಾಟಿಸಿ ಮಾತನಾಡಿದ ಅವರು, ಕಾಲೇಜಿನ ಸಂಪನ್ಮೂಲಗಳನ್ನು ಅಧ್ಯಯನಕ್ಕೆ ಪೂರಕವಾಗಿ ಬಳಸಿಕೊಂಡು ನುರಿತ ಬೋಧಕರ ಮಾರ್ಗದರ್ಶನದೊಂದಿಗೆ ವೃತ್ತಿ-ಪ್ರವೃತ್ತಿಗಳಲ್ಲಿ ಯಶಸ್ಸು ಪಡೆಯುವಂತೆ ವಿದ್ಯಾರ್ಥಿಗಳನ್ನು ಪ್ರೇರೇಪಿಸಿದರು.

ಕೋರ್ಸಿನ ಸಂಯೋಜಕ ಮತ್ತು ವಾಣಿಜ್ಯಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಡಾ. ನೇಮಾನಿ ಸತೀಶ ಮಾತನಾಡಿ, ಪಠ್ಯಕ್ರಮದ ಹೊರತಾಗಿ ಸ್ಪರ್ಧಾತ್ಮಕ ಜಗತ್ತಿನಲ್ಲಿ ಯಶಸ್ಸನ್ನು ಪಡೆಯಲು ಅವಶ್ಯವಾದ ಸರ್ವಾಂಗೀಣ ಜ್ಞಾನ ಕೌಶಲ್ಯಗಳನ್ನು ನೀಡುವ ಉದಾತ್ತ ಧ್ಯೇಯದೊಂದಿಗೆ 30 ದಿನ – 60 ಗಂಟೆಗಳ ಈ ಕೋರ್ಸನ್ನು ಆರಂಭಿಸಲಾಗಿದೆ. ಇದರಲ್ಲಿ ಸಕ್ರಿಯವಾಗಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಗುವುದು ಎಂದು ತಿಳಿಸಿದರು.

ಐಕ್ಯೂಎಸಿ ಸಂಯೋಜಕ ಡಾ. ಜಿತೇಂದ್ರ ಜಹಾಗೀರದಾರ ಮಾತನಾಡಿ, ದೀರ್ಘಾವಧಿಯಲ್ಲಿ ಉನ್ನತಿ ಸಾಧಿಸಲು ವಿದ್ಯಾರ್ಥಿ ದೆಸೆಯಲ್ಲಿ ಶಿಸ್ತುಪಾಲನೆ ಹಾಗೂ ಸತತ ಪರಿಶ್ರಮ ಅತ್ಯವಶ್ಯಕವಾಗಿದ್ದು ಈ ನಿಟ್ಟಿನಲ್ಲಿ 'ತೇಜಸ್' ಕಾರ್ಯಕ್ರಮದ ಪೂರ್ಣಲಾಭ ಪಡೆಯುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಸುಧಾ ಕೌಜಗೇರಿ ಮಾತನಾಡಿ, ಕೋರ್ಸಿಗೆ ಅಪಾರ ಸಂಖ್ಯೆಯಲ್ಲಿ ಹೆಸರು ನೋಂದಾಯಿಸಿದ ವಿದ್ಯಾರ್ಥಿಗಳನ್ನು ಅಭಿನಂದಿಸಿ, ಹಲವು ಆಯಾಮಗಳಲ್ಲಿ ವಿದ್ಯಾರ್ಥಿಗಳನ್ನು ಸನ್ನದ್ಧಗೊಳಿಸಲು ವ್ಯವಸ್ಥಿತವಾಗಿ ಕಾರ್ಯಕ್ರಮಗಳನ್ನು ವಿನ್ಯಾಸಗೊಳಿಸುತ್ತಿರುವ ಅಧ್ಯಾಪಕವೃಂದವನ್ನು ಮುಕ್ತಕಂಠದಿಂದ ಶ್ಲಾಘಿಸುತ್ತ ಕಾಲೇಜು ಇಂತಹ ಕಾರ್ಯಕ್ರಮಗಳಿಗೆ ಸಂಪೂರ್ಣ ಬೆಂಬಲವನ್ನು ಎಂದಿನಂತೆ ನೀಡಲಿದೆಯೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಐಕ್ಯೂಎಸಿ ಸಹಸಂಯೋಜಕ ಡಾ. ಮಂಜುನಾಥ ತ್ಯಾಲಗಡಿ, ಸಾಂಸ್ಕೃತಿಕ ವಿಭಾಗದ ಸಂಚಾಲಕ ರಮೇಶ ಹುಲಕುಂದ, ಬೋಧಕರಾದ ಎಸ್.ಕೆ. ಆಲೂರ, ಎಸ್.ಬಿ. ಚಿಕ್ಕೇನಕೊಪ್ಪ, ನವೀನ ತಿರ್ಲಾಪೂರ, ಎಸ್.ವ್ಹಿ. ಮೂಲಿಮನಿ, ಸಾವಿತ್ರಿ ಟಿ, ಲೀಲಾ ಹರ್ಲಾಪುರ, ಮಹಾದೇವಿ ಪಾಟೀಲ, ವಿದ್ಯಾ, ಕಲ್ಯಾಣಿ ಕೊಚ್ಚತ್ ಹಾಗೂ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಮಹಿಳೆಯರಿಗಾಗಿ ಕೇಶ ತೈಲ ತಯಾರಿಕಾ ಕಾರ್ಯಾಗಾರ

## ಸ್ವಾವಲಂಬನೆಗೆ ಮತ್ತೊಂದು ಹೆಜ್ಜೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಪಟ್ಟಣದ ಬಾಲ ಲೀಲಾ ಮಹಾಂತ ಶಿವಯೋಗಿ ಗವಿಮಠದಲ್ಲಿ ಮಹಿಳೆಯರಿಗಾಗಿ ಕೇಶ ತೈಲ ತಯಾರಿಕೆ ಕುರಿತ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಗ್ರಾಮದ ಗಣ್ಯರಾದ ಶ್ರೀಮತಿ ಗೌರಮ್ಮ ಬಡ್ನಿ, ಶ್ರೀಮತಿ ಬಸವಣ್ಣೆಮ್ಮ ಬಾತಾಖಾನಿ, ಶ್ರೀಮತಿ ಯಲ್ಲಮ್ಮ, ಶ್ರೀ ವಿನಾಯಕ್ ಆರ್. ಹಾಗೂ ಡಾ. ಚೌಡಿ ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಹಿಳಾ ಮತ್ತು ಮಕ್ಕಳ ಸಾಂತ್ವನ ಕೇಂದ್ರದ ಅಧಿಕಾರಿಯಾದ ಶ್ರೀಮತಿ ಸುಜಾತಾ ಶಾಸ್ತ್ರಿಮಠ ಅವರು, ಮಹಿಳೆಯರು ಶಿಕ್ಷಣದ ಜೊತೆಗೆ ಸ್ವ ಉದ್ಯೋಗವನ್ನು ಆಯ್ದುಕೊಳ್ಳುವುದು ಅವಶ್ಯಕವಾಗಿದ್ದು, ಇಂತಹ ಕಾರ್ಯಾಗಾರಗಳು ಸ್ವಾವಲಂಬನೆಗೆ ದಾರಿ ಮಾಡಿಕೊಡುತ್ತವೆ ಎಂದು ತಿಳಿಸಿದರು.

ಕುಮಾರಿ ರಾಜೇಶ್ವರಿ ಬಡ್ನಿ ಅವರು ಗ್ರಾಮೀಣ ಮಹಿಳೆಯರ ಸಾಧನೆಗಳು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಳ್ಳುವಂತಾಗಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಾಗಾರದಲ್ಲಿ ಸುಮಾರು 40 ಮಹಿಳೆಯರು ಭಾಗವಹಿಸಿದ್ದು, ಕೇಶ ತೈಲ ತಯಾರಿಕೆಯ ಕುರಿತು ಪ್ರಾಯೋಗಿಕ ತರಬೇತಿಯನ್ನು ಪಡೆದರು.

ಕಾರ್ಯಕ್ರಮವನ್ನು ಸೆರೆಂಟಿಕಾ ರಿನಿವೆಬಲ್ಸ್ ಕಂಪನಿ, ದ್ವಾರಕಾಮಯಿ ಫೌಂಡೇಶನ್ ಹಾಗೂ ಸಿ.ಬಿ. ಬಡ್ನಿ ಪ್ರತಿಷ್ಠಾನವು ಸಂಯುಕ್ತವಾಗಿ ಆಯೋಜಿಸಿತ್ತು.

ಸಹಕಾರ ನೀಡಿದ ಶ್ರೀಮತಿ ದುರ್ಗಾ ಜಿ. ಅವರ ಸೇವೆಯನ್ನು ಭಾಗವಹಿಸಿದ ಮಹಿಳೆಯರು ಪ್ರಶಂಸಿಸಿದರು.

ಕಾರ್ಯಕ್ರಮದ ಅಂತ್ಯದಲ್ಲಿ ಎಲ್ಲಾ ಮಹಿಳೆಯರಿಗೆ ಅಭಿನಂದನಾ ಪತ್ರಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಸೆರೆಂಟಿಕಾ ಕಂಪನಿಯ ರಾಮಮೂರ್ತಿ, ಶ್ರೀಮತಿ ಗಾಯತ್ರಿ ವಿ., ಖಾಜಾವಲಿ ಮುಲ್ಲಾ, ನೇತ್ರಾವತಿ ಅಂಗಡಿ, ಗಣೇಶ ಚವಡಿ, ಈರಣ್ಣಾ ಗಾಣಿಗೇರ, ಸುನಂದಾ ಮಡಿಕೇರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka